ಸಂಪುಟ 01 | ಸಂಚಿಕೆ 197 | ಶನಿವಾರ 13 ಜೂನ್ 2026 | ಪುಟ 4 | ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೇಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

REGIONAL KANNADA DAILY MORNING

ಸಿಂಧನೂರು, ಮಸ್ಕಿ ಮಾನ್ವಿ, ಅಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಅಂತರರಾಷ್ಟ್ರೀಯ ಆಲ್ಬಿನಿಸಂ ಜಾಗೃತಿ ದಿನ (International Albinism Awareness Day): ಆಲ್ಬಿನಿಸಂ (ಚರ್ಮ ಮತ್ತು ಕೂದಲಿನಲ್ಲಿ ಬಣ್ಣ ಇಲ್ಲದಿರುವಿಕೆ) ಎಂಬ ಜನ್ಮಜಾತ ಸ್ಥಿತಿಯ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಈ ಸಮಸ್ಯೆಯಿಂದ ಬಳಲುತ್ತಿರುವವರ ಮೇಲಿನ ತಾರತಮ್ಯವನ್ನು ತಡೆಯಲು ವಿಶ್ವಸಂಸ್ಥೆಯು ಈ ದಿನವನ್ನು ಆಚರಿಸುತ್ತದೆ.

2) ವಿಶ್ವ ಸಾಫ್ಟ್‌ಬಾಲ್ ದಿನ (World Softball Day): ಸಾಫ್ಟ್‌ಬಾಲ್ ಕ್ರೀಡೆಯನ್ನು ಉತ್ತೇಜಿಸಲು ಮತ್ತು ಜಾಗತಿಕವಾಗಿ ಕ್ರೀಡಾ ಸ್ಫೂರ್ತಿಯನ್ನು ಹೆಚ್ಚಿಸಲು ಮೀಸಲಾದ ದಿನ.

3) ವಿಶ್ವ ಗಿನ್ ದಿನ (World Gin Day): ಸಾಮಾನ್ಯವಾಗಿ ಜೂನ್ ಎರಡನೇ ಶನಿವಾರದಂದು ಬರುವ ಈ ದಿನವು ಗಿನ್ ಪಾನೀಯವನ್ನು ಪ್ರೀತಿಸುವವರಿಗೆ ಅದನ್ನು ಆಚರಿಸಲು ಒಂದು ವಿಶೇಷ ದಿನವಾಗಿದೆ.

4) ರಾಷ್ಟ್ರೀಯ ಹೊಲಿಗೆ ಯಂತ್ರ ದಿನ
ಪ್ರತಿ ವರ್ಷ ಜೂನ್ 13 ರಂದು ರಾಷ್ಟ್ರೀಯ ಹೊಲಿಗೆ ಯಂತ್ರ ದಿನವನ್ನು (National Sewing Machine Day) ಆಚರಿಸಲಾಗುತ್ತದೆ. 1790ರ ಜೂನ್ 13ರಂದು ಇಂಗ್ಲಿಷ್ ಸಂಶೋಧಕ ಥಾಮಸ್ ಸೇಂಟ್ (Thomas Saint) ಅವರು ಹೊಲಿಗೆ ಯಂತ್ರದ ವಿನ್ಯಾಸಕ್ಕೆ ಮೊದಲ ಪೇಟೆಂಟ್ ಪಡೆದರು. ಈ ಆವಿಷ್ಕಾರವು ಜವಳಿ ಉದ್ಯಮದಲ್ಲಿ ಕ್ರಾಂತಿಯನ್ನು ಉಂಟುಮಾಡಿತು ಮತ್ತು ಜನರಿಗೆ ಬಟ್ಟೆ ಹೊಲಿಕೆಯನ್ನು ಹೆಚ್ಚು ಸುಲಭಗೊಳಿಸಿತು

## ಸುಭಾಷಿತ

ಮನುಷ್ಯರಲ್ಲಿ ಪರಿಪೂರ್ಣತೆಯನ್ನು ಹಿಗ್ಗಿಸುವದೇ ಶಿಕ್ಷಣ.

ಸ್ವಾಮಿ ವಿವೇಕಾನಂದ

ನೈಜ್ಯ ದೇಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ರಾಜ್ಯ ಸರ್ಕಾರಿ ನೌಕರರಿಗೆ ಜಿಯೋ-ಟ್ಯಾಗ್ಡ್ ಹಾಜರಾತಿ ವ್ಯವಸ್ಥೆ ಜಾರಿ

ನೈಜ್ಯ ದೇಸೆ ನ್ಯೂಸ್

**ಬೆಂಗಳೂರು: ರಾಜ್ಯ ಸರ್ಕಾರಿ ನೌಕರರು ಇನ್ನು ಮುಂದೆ ಪ್ರತಿದಿನ ಬೆಳಿಗ್ಗೆ 10 ಗಂಟೆಯೊಳಗೆ ಕಚೇರಿಗೆ ಹಾಜರಾಗಿ ಕರ್ತವ್ಯ ಆಪ್ ಮೂಲಕ ಹಾಜರಾತಿ ದಾಖಲಿಸುವುದು ಕಡ್ಡಾಯವಾಗಿದೆ. ನೌಕರರು ಕಚೇರಿಯಲ್ಲೇ ಇದ್ದು ಹಾಜರಾತಿ ಗುರುತಿಸಬೇಕೆಂಬ ಉದ್ದೇಶದಿಂದ ಸರ್ಕಾರ ಜಿಯೋ-ಟ್ಯಾಗ್ಡ್ ಹಾಜರಾತಿ ವ್ಯವಸ್ಥೆಯನ್ನು ಜಾರಿಗೆ ತಂದಿದೆ.**

ಸರ್ಕಾರಿ ನೌಕರರು ತಾವು ಕರ್ತವ್ಯ ನಿರ್ವಹಿಸುವ ಕಚೇರಿಯ ಆವರಣದಲ್ಲಿ ಇದ್ದಾಗ ಮಾತ್ರ ಡಿಜಿಟಲ್ ಹಾಜರಾತಿಯನ್ನು ದಾಖಲಿಸಲು ಸಾಧ್ಯವಾಗುತ್ತದೆ. ಜಿಯೋ-ಫೆನ್ಸಿಂಗ್ ತಂತ್ರಜ್ಞಾನದ ಮೂಲಕ ನೌಕರರ ನಿಖರವಾದ ಸ್ಥಳವನ್ನು ಇದು ಖಚಿತಪಡಿಸುತ್ತದೆ. ಕಚೇರಿಗೆ ತಲುಪಿದ ಮೇಲೆ ನಿಗದಿತ ಸಮಯದೊಳಗೆ ಹಾಜರಾತಿ ದಾಖಲಿಸುವುದು ಕಡ್ಡಾಯವಾಗಿದೆ. ವರದಿಗಳ ಪ್ರಕಾರ, ಕಚೇರಿಯ ಕೆಲಸದ ಸಮಯ ಪ್ರಾರಂಭವಾದ 10 ಗಂಟೆಗಳ ಬಳಿಕ ಹಾಜರಾತಿಯನ್ನು ದಾಖಲಿಸಲು ತಂತ್ರಾಂಶದಲ್ಲಿ ಅವಕಾಶವಿರುವುದಿಲ್ಲ. ಇದು ಕಚೇರಿ ಸಮಯಪಾಲನೆಯನ್ನು ಕಟ್ಟುನಿಟ್ಟಾಗಿಸುವ ಉದ್ದೇಶವನ್ನು ಹೊಂದಿದೆ.

ಈ ಡಿಜಿಟಲ್ ವ್ಯವಸ್ಥೆಯು ಹಾಜರಾತಿಯಲ್ಲಿ ನಡೆಯಬಹುದಾದ ಅಕ್ರಮಗಳನ್ನು ತಡೆಗಟ್ಟಲು ಮತ್ತು ನೌಕರರ



ಸಕಾಲಿಕ ಹಾಜರಾತಿಯನ್ನು ಮೇಲ್ವಿಚಾರಣೆ ಮಾಡಲು ಸರ್ಕಾರಕ್ಕೆ ನೇರ ಅವಕಾಶ ಕಲ್ಪಿಸುತ್ತದೆ. ನೌಕರರು ತಮ್ಮ ಮೊಬೈಲ್ ಅಪ್ಲಿಕೇಶನ್ ಅಥ-'ವಾ ಕಚೇರಿಯಲ್ಲಿರುವ ನಿರ್ದಿಷ್ಟ ಡಿಜಿಟಲ್ ಸಾಧನಗಳ ಮೂಲಕ ಲಾಗಿನ್ ಆಗಬೇಕಾಗುತ್ತದೆ. ಇಂಟರ್ನೆಟ್ ಸಂಪರ್ಕ ಮತ್ತು ಜಿಪಿಎಸ್ (ಉ) ಆನ್ ಆಗಿರುವುದು ಕಡ್ಡಾಯವಾಗಿರುತ್ತದೆ.

ಪ್ರಮುಖ ಪರಿಣಾಮಗಳು :
ಕಚೇರಿ ಸಮಯಪಾಲನೆ: ತಡವಾಗಿ ಬರುವ ಮತ್ತು ಕಚೇರಿಯಿಂದ ಬೇಗ ನಿರ್ಗಮಿಸುವ ಅಭ್ಯಾಸಕ್ಕೆ ಈ ನಿಯಮ ಕಡಿವಾಣ ಹಾಕಲಿದೆ.
ಉತ್ತರದಾಯಿತ್ವ: ನೌಕರರು ತಮ್ಮ ಕರ್ತವ್ಯದ ಸ್ಥಳದಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳುವುದ-ರಿಂದ, ಸಾರ್ವಜನಿಕರಿಗೆ ಸೇವೆಗಳು ಸಕಾಲದಲ್ಲಿ ದೊರೆಯಲು ಸಹಕಾರಿಯಾಗುತ್ತದೆ.
ಡಿಜಿಟಲೀಕರಣ: ಕಾಗದರಹಿತ ಮತ್ತು ಡಿಜಿಟಲ್ ಆಡಳಿತದತ್ತ ಸರ್ಕಾರಿ ಸೇವೆಗಳನ್ನು ಕೊಂಡೊಯ್ಯುವ ನಿಟ್ಟಿನಲ್ಲಿ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ.ಈ ನಿಯಮವು ಸರ್ಕಾರಿ ಕಚೇರಿಗಳಲ್ಲಿ ಕೆಲಸದ ಸಂಸ್ಕೃತಿಯನ್ನು ಸುಧಾರಿಸಲು ಮತ್ತು ಆಡಳಿತಾತ್ಮಕ ದಕ್ಷತೆಯನ್ನು ಹೆಚ್ಚಿಸಲು ಕೈಗೊಳ್ಳಲಾದ ಪ್ರಮುಖ ಕ್ರಮವಾಗಿ ಕಂಡುಬರುತ್ತಿದೆ.

ರಾಜ್ಯದ ಎಲ್ಲ ಇಲಾಖೆಗಳ ಮುಖ್ಯಸ್ಥರು, ಡ್ರಾಯಿಂಗ್ ಮತ್ತು ಡಿಸ್ಬರ್ಸಿಂಗ್ ಅಧಿಕಾರಿಗಳಿಗೆ ಹಣಕಾಸು ಇಲಾಖೆಯ ಮಾನವ ಸಂಪನ್ಮೂಲ ನಿರ್ವಹಣಾ ವ್ಯವಸ್ಥೆ ವಿಭಾಗ ಸುತ್ತೋಲೆ ಹೊರಡಿಸಿದೆ. ಇದರಂತೆ, ಪ್ರತಿಯೊಂದು ಸರ್ಕಾರಿ ಕಚೇ-ರಿಯ ಭೌಗೋಳಿಕ ಸ್ಥಳಾಂಕಗಳ ಪರಿಶೀಲನೆ ಮತ್ತು ದೃಢೀಕರಣ ಮಾಡಬೇಕಾಗಿದೆ. ಹೊಸ ವ್ಯವಸ್ಥೆಯಲ್ಲಿ ನೌಕರರು ಕಚೇರಿಗೆ ಬಂದ ಬಳಿಕವೇ ಹಾಜರಾತಿ ದಾಖಲಿಸಬಹುದಾಗಿದೆ. ಜಿಯೋ-ಕೋ ಆರ್ಡಿನೇಟ್ ತಂತ್ರಜ್ಞಾನದ ಮೂಲಕ ನೌಕರರು ನಿಗದಿತ ಕಚೇರಿ ಸ್ಥಳದಲ್ಲಿದ್ದಾರೆಯೇ ಎಂಬುದನ್ನು ವ್ಯವಸ್ಥೆ ದೃಢಪಡಿಸಲಿದೆ. ಇದಕ್ಕಾಗಿ ರಾಜ್ಯದ ಇ-ಆಡಳಿತ ಇಲಾಖೆ ಅಭಿವೃದ್ಧಿಪಡಿಸಿರುವ ಕರ್ತವ್ಯ ಆಪ್ ಅನ್ನು ಎಲ್ಲಾ ಸರ್ಕಾರಿ ನೌಕರರು ಡೌನ್‌ಲೋಡ್ ಮಾಡಿಕೊಂಡು ನೋಂದಣಿ ಮಾಡಿಕೊಳ್ಳಬೇಕಾಗಿದೆ.

ಹಣಕಾಸು ಇಲಾಖೆಯ ಮೂಲಗಳ ಪ್ರಕಾರ, ಈ ಹಿಂದೆ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ ಇದ್ದರೂ ಅದು ಪರಿಣಾಮಕಾ-ರಿಯಾಗಿ ಕಾರ್ಯ ನಿರ್ವಹಿಸುತ್ತಿರಲಿಲ್ಲ. ಕೆಲವು ಕಡೆಗಳಲ್ಲಿ ಯಂತ್ರಗಳು ದುರಸ್ತಿಯಲ್ಲಿವೆ ಎಂದು ಹೇಳಿ ಹಾಜರಾತಿ ವ್ಯವಸ್ಥೆಯನ್ನು ನಿರ್ಲಕ್ಷಿಸಲಾಗುತ್ತಿತ್ತು. ಆದರೆ, ಹೊಸ ಜಿಯೋ-ಟ್ಯಾಗ್ಡ್ ವ್ಯವಸ್ಥೆಯಲ್ಲಿ ನೌಕರರು ಬೇರೆ ಸ್ಥಳದಿಂದ ಹಾಜರಾತಿ ದಾಖಲಿಸಲು ಸಾಧ್ಯವಿಲ್ಲ. ಕಚೇ-ರಿಯಲ್ಲೇ ಹಾಜರಿದ್ದು, ನೈಜ ಸಮಯದಲ್ಲಿ ಹಾಜರಾತಿ ಗುರುತಿಸಬೇಕಾಗುತ್ತದೆ.

ಈ ವ್ಯವಸ್ಥೆಯನ್ನು ಮೊದಲಿಗೆ ಆರೋಗ್ಯ ಇಲಾಖೆಯಲ್ಲಿ ಪ್ರಾಯೋಗಿಕವಾಗಿ ಜಾರಿಗೆ ತರಲಾಗಿತ್ತು. ಅಲ್ಲಿ ಉತ್ತಮ ಫಲಿತಾಂಶ ಕಂಡುಬಂದ 3ನೇ ಪುಟಕ್ಕೆ

# ದಲಿಯ ಸಂಘರ್ಷ ಸಮಿತಿಗೆ ನೂತನ ತಾಲೂಕು ಯುವ ಘಟಕ ಅಧ್ಯಕ್ಷರಾಗಿ ಕೆ.ಜಾಫರ್ ಆಯ್ಕೆ

ನೈಜ್ಯ ದೇಸೆ ನ್ಯೂಸ್

**ಬಳ್ಳಾರಿ / ಕಂಪ್ಲಿ: ಪಟ್ಟಣದ ಅತಿಥಿ ಗೃಹದಲ್ಲಿ ಕರ್ನಾಟಕ ದಲಿತ ಸಂಘರ್ಷ ಸಮಿತಿ(ಬುದ್ಧ, ಬಸವ, ಅಂಬೇಡ್ಕರ್ ವಾದ)ಯ ತಾಲೂಕು ಮತ್ತು ಯುವ ಘಟಕಕ್ಕೆ ನೂತನ ಪದಾಧಿಕಾ-ರಿಗಳನ್ನು ಸರ್ವಾನುಮತದಿಂದ ಶುಕ್ರವಾರ ಆಯ್ಕೆ ಮಾಡಲಾಯಿತು.**

ಇಲ್ಲಿನ ಸಂಘಟನಾ ಸಭೆಯಲ್ಲಿ ಜಿಲ್ಲಾ ಉಪಾಧ್ಯಕ್ಷ ಕರಡಿ ವಲಿಸಾಬ್ ಮಾರ್ಗದರ್ಶನದಲ್ಲಿ ತಾಲೂಕು ಅಧ್ಯಕ್ಷ ಸಿ.ಬಸವರಾಜ ನೇತೃತ್ವದಲ್ಲಿ ನೂತನ ಪದಾಧಿಕಾರಿಗಳ ಆಯ್ಕೆ ಮಾಡಿದರು. ತಾಲೂಕು ಉಪಾಧ್ಯಕ್ಷರಾಗಿ ಮೆಟ್ರಿ ಸೋಮಪ್ಪ ಮತ್ತು ತಾಲೂಕು ಯುವ ಘಟಕ ಅಧ್ಯಕ್ಷರಾಗಿ ಕೆ.ಜಾಫರ್ ಇವರನ್ನು ಆಯ್ಕೆ ಮಾಡಿ, ಆದೇಶ



ಪ್ರತಿ ನೀಡಿ, ಸನ್ಮಾನಿಸಿ ಅಭಿನಂದಿಸಿದರು. ನಂತರ ಜಿಲ್ಲಾ ಉಪಾಧ್ಯಕ್ಷ ಕರಡಿ ವಲಿಸಾಬ್ ಮಾತನಾಡಿ, ತಾಲೂಕು ಸೇರಿದಂತೆ ಬಳ್ಳಾರಿ ಜಿಲ್ಲೆಯಲ್ಲಿ ಸಂಘಟನೆಯನ್ನು ಬಲ ಪಡಿಸುವ ಸಲುವಾಗಿ ರಾಜ್ಯಾದ್ಯಂತ ಘಟಕಗಳನ್ನು ತೆರೆದಿದ್ದು, ಜನ ಪರ ಚಳುವಳಿಗಳಲ್ಲಿ ಕ್ರಿಯಾಶೀಲವಾಗಿ ತೊಡಗಿಸಿಕೊಂಡು ಬರುತ್ತಿರುವ ತಮ್ಮ ಸೇವೆಯನ್ನು ಗುರುತಿಸಿ ಆಯ್ಕೆ ಮಾಡಲಾಯಿತು.

ತಾಲೂಕು ಮಟ್ಟದಲ್ಲಿ ಬಲಿಷ್ಠಗೊಳಿಸಲು ಜಿಲ್ಲಾ ಸಮಿತಿಯೊಂದಿಗೆ ಸಹಕರಿಸಬೇಕೆಂದು, ತಮ್ಮ ಹೋರಾಟ ಮುಂಚೂಣಿಯಲ್ಲಿ ಮಾಡಲು ಜಿಲ್ಲಾ ಸಮಿತಿಯೊಂದಿಗೆ ಸಹಕರಿಸುತ್ತಾ ಅಖಿಲ ಕರ್ನಾಟಕ ದಲಿತ ಸಂಘರ್ಷ ಸಮಿತಿ, ಸಂಘಟನೆಗೆ ಯಾವುದೇ ರೀತಿಯಲ್ಲಿ ಧಕ್ಕೆ ಬಾರದಂತೆ ಜನಪರ ಚಳುವಳಿಗಳನ್ನು ರೂಪಿಸಿಕೊಂಡು ಹೋಗಬೇಕು ಎಂದು ಕಿವಿ ಮಾತು ಹೇಳಿದರು. ಈ ಸಂದರ್ಭದಲ್ಲಿ ತಾಲೂಕು ಗೌರವಾಧ್ಯಕ್ಷ ಚಂದ್ರಶೇಖರ, ಖಜಾಂಚಿ ಗಂಗಾಧರ, ಮುಖಂಡರಾದ ಸಣ್ಣ ಹುಲುಗಪ್ಪ, ಅಂಜಿನಪ್ಪ, ರುದ್ರಪ್ಪ, ರಫೀಕ್, ಪಕ್ಕೀರಪ್ಪ, ಮಾರೆಪ್ಪ, ಅನ್ವರ್‌ಸಾಬ್, ಕೆ.ಲಕ್ಷ್ಮಣ, ಬಾಲಪ್ಪ, ಯಲ್ಲಪ್ಪ ಇದ್ದರು.

# ಅಸಿಸ್ಟೆಂಟ್ ಕಂಪ್ಯೂಟರ್ ಅಪರೇಟರ್ ತರಬೇತಿ ಕಾರ್ಯಕ್ರಮ ಉದ್ಘಾಟನೆ

ನೈಜ್ಯ ದೇಸೆ ನ್ಯೂಸ್

**ಮಸ್ಕಿ: ಪಟ್ಟಣದಲ್ಲಿರುವ ಹೈಟೆಕ್ ಕಂಪ್ಯೂಟರ್ ಶಿಕ್ಷಣ ತರಬೇತಿ ಕೇಂದ್ರದಲ್ಲಿ ಜನ ಶಿಕ್ಷಣ ಸಂಸ್ಥಾನ ರಾಯಚೂರು ಇವರ ನೇತೃತ್ವದಲ್ಲಿ "ಅಸಿಸ್ಟೆಂಟ್ ಕಂಪ್ಯೂಟ-ರ್ ಆಪರೇಟರ್" ತರಬೇತಿ ಉದ್ಘಾಟನೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.**

ಉದ್ಘಾಟನೆಯನ್ನು ಶ್ರೀ ಶರಣಯ್ಯ ಗುಡದೂರು ಉಪನ್ಯಾಸಕರು ನೆರವೇರಿಸಿ ಮಾತನಾಡಿ ಮಸ್ಕಿ ಪಟ್ಟಣದಲ್ಲಿ ಹಲವಾರು ವರ್ಷಗಳಿಂದ ಉಚಿತವಾಗಿ ಮತ್ತು ವಿವಿಧ ರೀತಿಯ ಕೌಶಲಗಳನ್ನು ಕಲಿಸುವ ಮೂಲಕ ಹಲವಾರು ವಿದ್ಯಾರ್ಥಿಗಳು ಇಂದು ಸ್ವಂತ ಉದ್ಯೋಗ ಮಾಡುತ್ತಿರುವುದು ಹೆಮ್ಮೆಯ ವಿಚಾರ ಎಂದು ಹೇಳಿದರು. ಅಧ್ಯಕ್ಷತೆಯನ್ನು ಶ್ರೀ ಸದಾನಂದ ಎಂ. ಪೂಜಾರಿ ನಿರ್ದೇಶಕರು



ಜೆ ಎಸ್ ಎಸ್ ನಿರ್ವಹಿಸಿದರು. ಈ ವೇಳೆಯಲ್ಲಿ ಕೃಷ್ಣ ಚಿಗರಿ ಪುರಸಭೆ ಸದಸ್ಯ, ಟಿ ಎಸ್ ಸಿ ರಾಯಚೂರ , ಪೋಮಣ್ಣ ರಾಯಚೂರು, ಶಿಕ್ಷಕರಾದ ಚಂದ್ರಶೇಖರ್ ಬೋವಿ, ಯಮನೂರು ಕನ್ನಾರಿ ಹೈಟೆಕ್ ಕಂಪ್ಯೂಟರ್ ಶಿಕ್ಷಣ ತರಬೇತಿ ಕೇಂದ್ರದ ವ್ಯವಸ್ಥಾಪಕರು ಹಾಗೂ ಸಂಪನ್ಮೂಲ ವ್ಯಕ್ತಿಗಳು, ಶ್ರೀ ಬಸವರಾಜ್ ಮಾನ್ವಿ ಅಸಿಸ್ಟೆಂಟ್ ಪ್ರೋಗ್ರಾಮ್ ಆಫೀಸರ್ ರಾಯಚೂರ ಹಾಗೂ ಕಲಿಕಾರ್ಥಿಗಳು ಭಾಗವಹಿಸಿದ್ದರು.

# ಪುರಾಣ-ಪ್ರವಚನಗಳ ಆಲಿಕೆಯಿಂದ ಜೀವನ ಪಾವನ: ಪ್ರಭುಲಿಂಗ ಶ್ರೀ

ನೈಜ್ಯ ದೇಸೆ ನ್ಯೂಸ್

**ತಾಳಿಕೋಟಿ: ಈ ಜಗತ್ತಿಗೆ ನಮ್ಮನ್ನು ಸಂಸ್ಕ-ರಿಸಲು ಬಂದ ಮಹಾತ್ಮರ, ದಾರ್ಶನಿಕರ, ಶರಣರ ಹಾಗೂ ಮಹಾಪುರುಷರ ಜೀವನ ಚರಿತ್ರೆಯನ್ನು ಪುರಾಣ ಪ್ರವಚನಗಳ ಮೂಲಕ ಆಲಿಸುವುದರಿಂದ ನಮ್ಮ ಜೀವನ ಪಾವನಗೊಳ್ಳುತ್ತದೆ ಎಂದು ಹಿಕ್ಕನಗುತ್ತಿ ಲಿಂಗಾಯತ ಮಹಾಮಠದ ಪೂಜ್ಯಶ್ರೀ ಪ್ರಭುಲಿಂಗ ಮಹಾಸ್ವಾಮಿಗಳು ಹೇಳಿದರು.**

ಗುರುವಾರ ಪಟ್ಟಣದ ರಾಜವಾಡೆ ಆವರಣದಲ್ಲಿ ವೀರರಾಣಿ ಕಿತ್ತೂರು ಚೆನ್ನಮ್ಮ ಮೂರ್ತಿ ಪ್ರತಿಷ್ಠಾಪನಾ ಸಮಿತಿಯಿಂದ 3 ನೇ ವರ್ಷದ ವರ್ಷಾಚರಣೆ ಪ್ರಯುಕ್ತ 12 ದಿನಗಳ ಕಾಲ ಹಮ್ಮಿಕೊಂಡ ವೀರರಾಣಿ ಕಿತ್ತೂರು ಚೆನ್ನಮ್ಮ ಪುರಾಣ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ವೀರರಾಣಿ ಕಿತ್ತೂರು ಚೆನ್ನಮ್ಮಳ ಜೀವನ ಚರಿತ್ರೆಯನ್ನು ಪ್ರತಿಯೊಬ್ಬ ದೇಶಭಕ್ತನು



ತಿಳಿದುಕೊಳ್ಳಬೇಕು ಅವಳ ಶೌರ್ಯ ಸಾಹಸ ನಮಗೆಲ್ಲರಿಗೂ ಮಾದರಿಯಾಗಿದೆ.

ಇಲ್ಲಿ 12 ದಿನಗಳ ಕಾಲ ಪುರಾಣ ಜರುಗಲಿದೆ ಅದರ ಸದುಪಯೋಗ ನೀವೆಲ್ಲರೂ ಮಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಪ್ರತಿದಿನದ ಕಾರ್ಯಕ್ರಮದ ಅಂತ್ಯದಲ್ಲಿ ಜರುಗಲಿರುವ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನಿಸುವ ಕಾರ್ಯಕ್ರಮದ ನಿಮಿತ್ಯ ಮೊದಲ ದಿನದಲ್ಲಿ 22 ರೈತ ದಂಪತಿಗಳನ್ನು ಸಮಿತಿ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕುಮಾರ ಬಾವಿಮನಿ ಹಾಗೂ ಬಸನಗೌಡ ಬಿರಾದಾರ ಅವರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಸಮಿತಿಯ ಗೌರವಾಧ್ಯಕ್ಷ ಚಂದ್ರಶೇಖರ ಸಿ.ಪಾಟೀಲ, ಅಧ್ಯಕ್ಷರಾದ ನೀಲಮ್ಮಗೌಡತಿ ಪಾಟೀಲ, ಸಮಿತಿಯ ಪದಾಧಿಕಾರಿಗಳು ಹಾಗೂ ಅಪಾರ ಸಂಖ್ಯೆಯಲ್ಲಿ ಮಹಿಳೆಯರು ಉಪಸ್ಥಿತರಿದ್ದರು.

# ಮೃತರ ಕುಟುಂಬಕ್ಕೆ ಶಾಸಕ ಅಪ್ಪಾಜಿ ನಾಡಗೌಡ ಸಾಂತ್ವನ ಶೀಘ್ರ ಪರಿಹಾರ ಒದಗಿಸುವ ಭರವಸೆ

ನೈಜ್ಯ ದೇಸೆ ನ್ಯೂಸ್

**ತಾಳಿಕೋಟಿ: ಪಟ್ಟಣದ ಭೂಮಿಕಾ ಹೋಟೆಲ್ದಲ್ಲಿ ಸಿಲಿಂಡರ್ ಗ್ಯಾಸ್ ಸೋರಿಕೆಯಿಂದಾಗಿ ಸಂಭವಿಸಿದ ಅಗ್ನಿ ಅವಘಡದಿಂದ ಮೃತಪಟ್ಟ ಶಕೀಲ ಕುಂಬಾರವಾಡಿ, ಬಸೀರ ಕಡದರಾಳ, ರಾಜಕುಮಾರ ಗೊಟಗುಣಕಿ ಹಾಗೂ ತೀವ್ರ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿರುವ ಯುವಕ ಕಿರಣ ಕೋಟೆಮನಿ ಅವರ ನಿವಾಸಕ್ಕೆ ಶಾಸಕ ಅಪ್ಪಾಜಿ ನಾಡಗೌಡರು ಗುರುವಾರ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಕುಟುಂಬದ ಸದಸ್ಯರೊಂದಿಗೆ ಮಾತುಕತೆ ನಡೆಸಿದ ಶಾಸಕ ನಾಡಗೌಡರು ಅವರ ದುಃಖದಲ್ಲಿ ಭಾಗಿಯಾಗಿ ವೈಯಕ್ತಿಕವಾಗಿ ಧನಸಹಾಯವನ್ನು ನೀಡಿ ಧೈರ್ಯ ತುಂಬಿದರು.**

ಕುಟುಂಬವು ಎದುರಿಸುತ್ತಿರುವ ಸಂಕಷ್ಟದ



ಪರಿಸ್ಥಿತಿಯನ್ನು ಆಲಿಸಿದ ಅವರು ಸರ್ಕಾರದಿಂದ ದೊರೆಯ ಬಹುದಾದ ಪರಿಹಾರವನ್ನು ಶೀಘ್ರದಲ್ಲಿ ಮಂಜೂರು ಮಾಡಿಸಿಕೊಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಹಾಗೂ ಮೃತ ಶಕೀಲ ಕುಂಬಾರವಾಡಿ ಅವರ ಧರ್ಮಪತ್ನಿಗೆ ಕುಟುಂಬದ ನಿರ್ವಹಣೆಗಾಗಿ ಒಂದು ಸರ್ಕಾರಿ ನೌಕರಿ ಕೊಡಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು. ಸಿಲೆಂಡರ್ ಗ್ಯಾಸ್ ಸೋರಿಕೆ ಆಗದಂತೆ ಸಾಕಷ್ಟು ಮುಂಜಾಗ್ರತಾ ಕ್ರಮ ತೆಗೆದುಕೊಳ್ಳುವ ಅಗತ್ಯವಿದೆ ಅದು ಇಲ್ಲದೆ ಹೋದಲ್ಲಿ ಇಂತಹ ಅಪಘಡಗಳು ಸಂಭವಿಸಿ ಅಮೂಲ್ಯ ಜೀವಿಗಳು ಕಳೆದುಕೊಳ್ಳಬೇಕಾಗುತ್ತದೆ ಸಾರ್ವಜನಿಕರು ಈ ಕುರಿತು ಹೆಚ್ಚು ಜಾಗೃತಿ ವಹಿಸಬೇಕು ಎಂದರು.

ಮೃತಪಟ್ಟ ವ್ಯಕ್ತಿಗಳ ಸಣ್ಣ ಸಣ್ಣ ಮಕ್ಕಳನ್ನು ನೋಡಿ ದುಖಿತರಾದ ಅವರು ಯಾವುದೇ ಕುಟುಂಬ ಇಂಥಹ ನೋವನ್ನು ಅನುಭವಿಸಬಾರದು. ಜನರ ಸಂಕಷ್ಟದ ಸಮಯದಲ್ಲಿ ಅವರೊಂದಿಗೆ ನಿಲ್ಲುವುದು ನನ್ನ ಕರ್ತವ್ಯವಾಗಿದ್ದು ಮೃತರ ಕುಟುಂಬಕ್ಕೆ ಸಾಧ್ಯವಾದ ಎಲ್ಲ ರೀತಿಯ ನೆರವು ಮತ್ತು ಸಹಕಾರ ನೀಡಲು ಸದಾ ಬದ್ಧನಾಗಿದ್ದೇನೆ ಎಂದು ಅವರು ಹೇಳಿದರು. ಭಗವಂತ ಅಗಲಿದ ವ್ಯಕ್ತಿಗಳ ಆತ್ಮಕ್ಕೆ ಚಿರಶಾಂತಿ ನೀಡಲಿ ಹಾಗೂ ಅವರ ಕುಟುಂಬದ ಸದಸ್ಯರಿಗೆ ಈ ಅಪಾರ ದುಃಖವನ್ನು ಭರಿಸುವ ಶಕ್ತಿ, ಧೈರ್ಯ ಮತ್ತು ನೆಮ್ಮದಿಯನ್ನು ಕರುಣಿಸಿಲೆಂದು ಪ್ರಾರ್ಥಿಸಿದರು.

ಇದೇ ಸಂದರ್ಭದಲ್ಲಿ ಅವರು ತನ್ನ ಜೀವವನ್ನು ಪಣಕ್ಕಿಟ್ಟು ಏಳು ಜನರ ಜೀವವನ್ನು ಉಳಿಸಲು ಪ್ರಯತ್ನಿಸಿದ ಯುವಕ ಕಿರಣ್ ಕೋಟೆಮನಿ ಇವರ ಸಾಹಸಕ್ಕೆ ಮೆಚ್ಚುಗೆ ವ್ಯಕ್ತಪಡಿಸಿ ಅವರನ್ನು ಸತ್ಕರಿಸಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಧಾರ್ಮಿಕ ಮುಖಂಡ ಸಯ್ಯದ್ ಶಕೀಲ ಅಹ್ಮದ್ ಕಾಜಿ, ಪುರಸಭೆ ಮುಖ್ಯಾ ಧಿಕಾರಿ ವಸಂತ ಪವಾರ, ಮುಖಂಡರಾದ ಸುರೇಶಧಣಿ ನಾಡಗೌಡ (ಬಿಂಜಲಭಾವಿ) ಸಿದ್ದನಗೌಡ ಪಾಟೀಲ(ನಾವದಗಿ), ಪ್ರಭುಗೌಡ ಮದರಕಲ್ಲ,ಇಬ್ರಾಹಿಂ ಮನ್ಸೂರ್, ನೀಲಮ್ಮಗೌಡ್ತಿ ಪಾಟೀಲ, ಮೆಹಬೂಬ ಕೆಂಭಾವಿ, ಮೋದಿನಸಾ ನಗಾರ್ಚಿ,ಫಯಾಜ ಉತ್ನಾಳ,ಸಿಕಂದರ ಡೋಣಿ, ಸದ್ದಾಂ ಹೊನ್ನಳ್ಳಿ, ಆಸೀಫ ಕೆಂಭಾವಿ, ಗೋಪಾಲ ಕಟ್ಟಿಮನಿ, ಕಾರ್ಯಕರ್ತರು ಹಾಗೂ ಬಡಾವಣೆಯ ನಿವಾಸಿಗಳು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

### ಶೂನ್ಯಸಂಪಾದನೆ.!

ಎಷ್ಟೆಲ್ಲ ಭರವಸೆಯಿಟ್ಟರೂ
ಏನೆಲ್ಲ ನಂಬಿಕೆ ನೆಟ್ಟರೂ
ಹೇಗೆಲ್ಲ ಅಭಯ ಕೊಟ್ಟರೂ
ಕೆಲವೊಮ್ಮೆ ಮನದ
ನರಳಿಕೆ ನಿಲ್ಲುವುದೇ ಇಲ್ಲ.!

ಎಷ್ಟೆಲ್ಲ ಸಂತೈಸಿದರೂ
ಏನೆಲ್ಲ ರಮಿಸಿದರೂ
ಹೇಗೆಲ್ಲ ಲಾಲಿಸಿದರೂ
ಕೆಲವೊಮ್ಮೆ ಒಡಲ
ಬಿಕ್ಕಳಿಕೆ ನಿಲ್ಲುವುದೇ ಇಲ್ಲ.!

ಎಷ್ಟೆಲ್ಲ ಹಣತೆ ಹಚ್ಚಿದರೂ
ಏನೆಲ್ಲ ಜ್ಯೋತಿ ಬೆಳಗಿದರೂ
ಹೇಗೆಲ್ಲ ಬೆಳಕ ತುಂಬಿದರೂ
ಕೆಲವೊಮ್ಮೆ ಎದೆಯ
ಕನವರಿಕೆ ನಿಲ್ಲುವುದೇ ಇಲ್ಲ.!

ಸಕಲವೂ ಸರಿಯಾಯ್ತು
ಮನಸು ನಿರಾಳವಾಯ್ತು
ಎನ್ನುವಷ್ಟರಲ್ಲೇ ಮತ್ತೆ..
ನೋವಿನ ಆಕ್ರಂದನ.!
ಕಾಡುವ ಅರಣ್ಯರೋಧನ.!

ಸಮಸ್ತವೂ ತಿಳಿಯಾಯ್ತು
ಹೊಂಬೆಳಕು ಮೂಡಿತು
ಅನಿಸುವಷ್ಟರಲ್ಲಿ ಮರಳಿ..
ಅಂಧಕಾರದ ಆವರ್ತನ.!
ಕತ್ತಲೆಯ ರುದ್ರನರ್ತನ.!

ಎಲ್ಲೆಡೆ ಹತ್ತಿಸುತ್ತಿ ಕೊನೆಗೆ
ಮೊದಲಿನಲ್ಲಿಗೇ ಬಂದು
ನಿಲ್ಲುವ ಯಾತನಾ ಲಹರಿ.!
ಅಗೆದು ಬಗೆದು ಕಟ್ಟಕಡೆಗೆ
ಶೂನ್ಯಸಂಪಾದನೆಯ ಪರಿ.!

ಎ.ಎನ್.ರಮೇಶ್. ಗುಬ್ಬಿ

## ದೇವದುರ್ಗ ಬ್ಲಾಕ್ ಕಾರ್ಮಿಕ ಕಾಂಗ್ರೆಸ್ ವಿಭಾಗದ ಅಧ್ಯಕ್ಷರಾಗಿ ಖಾಸಿಂ ಸಾಬ್ ಬುವಾಜಿ ಗೌರಂಪೇಟ್ ನೇಮಕ

❑ ನೈಜ್ಯ ದೆಸೆ ನ್ಯೂಸ್

ದೇವದುರ್ಗ: ರಾಯಚೂರು ಜಿಲ್ಲಾ ಕಾಂಗ್ರೆಸ್ ಕಾರ್ಮಿಕ ವಿಭಾಗದ ಜಿಲ್ಲಾ ಅಧ್ಯಕ್ಷರಾದ ಎ. ಉರುಕುಂದಪ್ಪ ಅವರ ಆದೇಶದಂತೆ ದೇವದುರ್ಗ ಬ್ಲಾಕ್ ಕಾರ್ಮಿಕ ಕಾಂಗ್ರೆಸ್ ವಿಭಾಗದ ತಾಲೂಕು ಅಧ್ಯಕ್ಷರಾಗಿ ಖಾಸಿಂ ಸಾಬ್ ಬುವಾಜಿ ಗೌರಂಪೇಟ್ ಅವರನ್ನು ನೇಮಕ ಮಾಡಲಾಗಿದೆ.

ಈ ನೇಮಕಾತಿಯು ಜಿ. ಕುಮಾರ್ ನಾಯಕ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಬಸವರಾಜ್ ಪಾಟೀಲ್ ಇಟಗಿ, ದೇವದುರ್ಗ ವಿಧಾನಸಭಾ ಕ್ಷೇತ್ರದ ಮಾಜಿ ಅಭ್ಯರ್ಥಿ ಶ್ರೀದೇವಿ ಆರ್. ನಾಯಕ್, ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿಗಳು ಹಾಗೂ ದೇವದುರ್ಗ



ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಗೌಡ ಪಾಟೀಲ್ ಬಕ್ರೀ ಗೌರಂಪೇಟ್ ಅವರ ಶಿಫಾರಸ್ಸು ಮತ್ತು ಆದೇಶದ ಮೇರೆಗೆ ನಡೆದಿದ್ದು, ಖಾಸಿಂ ಸಾಬ್ ಬುವಾಜಿ ಗೌರಂಪೇಟ್ ಅವರಿಗೆ ಅಧಿಕೃತ ಆದೇಶ ಪತ್ರವನ್ನು ನೀಡಲಾಗಿದೆ.

ಪಕ್ಷದ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ, ಸಾಮಾಜಿಕ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸುವುದರ ಜೊತೆಗೆ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವಂತೆ ಸೂಚಿಸಿ ಈ ಜವಾಬ್ದಾರಿಯನ್ನು ವಹಿಸಲಾಗಿದೆ. ಜಾತಿ, ಧರ್ಮ ಹಾಗೂ ಇತರೆ ಭೇದಭಾವಗಳಿಗೆ ಅವಕಾಶ ನೀಡದೆ ಎಲ್ಲರನ್ನು ಒಗ್ಗೂಡಿಸಿಕೊಂಡು ಕಾರ್ಯನಿರ್ವಹಿಸುವಂತೆ ತಿಳಿಸಲಾಗಿದೆ.

ಅರಕೇರ ಪಟ್ಟಣದಲ್ಲಿರುವ ಶ್ರೀದೇವಿ ಆರ್. ನಾಯಕ್ ಅವರ ನಿವಾಸದಲ್ಲಿ ನಡೆದ ಕಾರ್ಯಕ್ರಮದಲ್ಲಿ ನೂತನ ಅಧ್ಯಕ್ಷರಿಗೆ ಆದೇಶ ಪತ್ರ ನೀಡಿ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ದೇವದುರ್ಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಗೌಡ ಪಾಟೀಲ್ ಬಕ್ರೀ ಗೌರಂಪೇಟ್, ಯುವ ಕಾಂಗ್ರೆಸ್ ತಾಲೂಕು ಅಧ್ಯಕ್ಷ ಲಿಂಗಣ್ಣ ಹವಾಲ್ದಾರ್ ಸೇರಿದಂತೆ ಪಕ್ಷದ ಪ್ರಮುಖ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ಇದೇ ವೇಳೆ ನಗರ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಖಾಜಾ ಪಾಶ ಹಾಗೂ ಯುವ ಕಾಂಗ್ರೆಸ್ ಉಪಾಧ್ಯಕ್ಷ ಬಾಬು ಬುವಾಜಿ ನೂತನ ಅಧ್ಯಕ್ಷರಿಗೆ ಅಭಿನಂದನೆ ಸಲ್ಲಿಸಿದರು.

## ಜಾಲಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ಬೃಹತ್ ಡ್ರೈನೇಜ್ ಸ್ವಚ್ಛತಾ ಕಾರ್ಯಕ್ರಮ

❑ ನೈಜ್ಯ ದೆಸೆ ನ್ಯೂಸ್

ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ ಅಂಬೇಡ್ಕರ್ ವೃತ್ತದಿಂದ ರಂಗನಾಥ ದೇವಸ್ಥಾನದವರೆಗೆ ನಾಲೆಗಳ (ಡ್ರೈನೇಜ್) ಸ್ವಚ್ಛತಾ ಕಾರ್ಯವನ್ನು ಜೆಸಿಬಿ ಯಂತ್ರಗಳ ಮೂಲಕ ಬೃಹತ್ ಮಟ್ಟದಲ್ಲಿ ಕೈಗೊಳ್ಳಲಾಯಿತು.

ಸಾರ್ವಜನಿಕರ ಪರವಾಗಿ ಮಾತನಾಡಿದ ಮುದುರಂಗಪ್ಪ ವಟಾರ್, ಗ್ರಾಮದ ಎಲ್ಲಾ ವಾರ್ಡ್‌ಗಳಲ್ಲಿ ಡ್ರೈನೇಜ್ ಮೇಲಿನ ಅತಿಕ್ರಮಣಗಳನ್ನು ತೆರವುಗೊಳಿಸಿ ಸಂಪೂರ್ಣ ಸ್ವಚ್ಛತೆ ಕಾಪಾಡುವಂತೆ ಮನವಿ ಮಾಡಿದರು. ಜಾಕಿರ್ ಹುಸೇನ್ ಆರತಿ ಗ್ರಾಮ ಪಂಚಾಯಿತಿಯ ಡ್ರೈನೇಜ್ ಸ್ವಚ್ಛತಾ ಕ್ರಮವನ್ನು ಶ್ಲಾಘಿಸಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಗ್ರಾಮ ಪಂಚಾಯಿತಿ



ಅಭಿವೃದ್ಧಿ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದ ನೇತೃತ್ವದಲ್ಲಿ ನಾಲೆಗಳ ಸ್ವಚ್ಛತೆ ಮತ್ತು ಅತಿಕ್ರಮಣ ತೆರವು ಕಾರ್ಯ ನಡೆಸಲಾಯಿತು. ಕಳೆದ ಎಂಟು ದಿನಗಳಿಂದ ರೈತ ಸಂಘ ಹಾಗೂ ಡಿವೈಎಫ್ಐ ನೇತೃತ್ವದಲ್ಲಿ ನಡೆಯುತ್ತಿದ್ದ ಹೋರಾಟದಲ್ಲಿ ನಾಲೆಗಳ ಸ್ವಚ್ಛತೆ ಹಾಗೂ ಅತಿಕ್ರಮಣ ತೆರವಿಗೆ ಒತ್ತಾಯಿಸಲಾಗಿತ್ತು. ಇದಕ್ಕೆ ಸ್ಪಂದಿಸಿದ ಗ್ರಾಮ ಪಂಚಾಯಿತಿ ಆಡಳಿತ ಮಂಡಳಿ ಮತ್ತು ಅಧಿಕಾರಿಗಳು ಗ್ರಾಮದ ಸ್ವಚ್ಛತೆಗೆ ಆದ್ಯತೆ ನೀಡಿ ಕಾರ್ಯಾರಂಭ ಮಾಡಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

ಈ ಸಂದರ್ಭದಲ್ಲಿ ಮಾತನಾಡಿದ ಗ್ರಾಮ ಪಂಚಾಯಿತಿ ಸದಸ್ಯ ಅಬ್ದುಲ್ ರೆಹಮಾನ್ ಖುರೇಶಿ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಅಭಿವೃದ್ಧಿ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದ ಸಹಕಾರದಿಂದ ಬೃಹತ್ ಡ್ರೈನೇಜ್ ಸ್ವಚ್ಛತಾ ಕಾರ್ಯಕ್ರಮ ಯಶಸ್ವಿಯಾಗಿ ನಡೆದಿರುವುದಾಗಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀಧರ ದೇಸಾಯಿ, ವೆಂಕೋಬ ತೋಟದ, ದುರ್ಗಪ್ಪ ರಾಮಪಾಳಿ, ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ವೀರೇಶ್ ಅರಿಕೇರಿ, ಸದಸ್ಯರಾದ ಅಬ್ದುಲ್ ರೆಹಮಾನ್ ಖುರೇಶಿ, ಶಿವಪ್ಪ ಗಾಂಜಿ, ತಿಮ್ಮಣ್ಣ ನಾಯಕ್ ದಿವಾನ್ ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ನರಸಪ್ಪ, ಬಿಲ್ ಕಲೆಕ್ಟರ್ ವೆಂಕೋಬ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಜಾಲಹಳ್ಳಿ ಪೊಲೀಸ್ ಠಾಣೆ ವತಿಯಿಂದ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿತ್ತು.

## "ನಾಳೆ ಪೇಜಾವರ ಶ್ರೀಗಳ ಮಸ್ಕಿ ಪುರ ಪ್ರವೇಶ"

❑ ನೈಜ್ಯ ದೆಸೆ ನ್ಯೂಸ್

ಮಸ್ಕಿ: ಅಧಿಕಮಾಸದ ನಿಮಿತ್ತ ತಾಲ್ಲೂಕಿನ ಬಳಗಾನೂರ ಪಟ್ಟಣದ ಬಂಧುಶತಪುರೇಶ ದೇವಸ್ಥಾನದಲ್ಲಿ ಜೂ. 14 ರಂದು ನಡೆಯುವ ವಿಶೇಷ ಕಾರ್ಯಕ್ರಮಲ್ಲಿ ಪಾಲ್ಗೊಳ್ಳಲು ಪೇಜಾವರಮಠದ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಆಗಮಿಸಲಿದ್ದಾರೆ ಎಂದು ದೇವಸ್ಥಾನ ಸಮಿತಿ ತಿಳಿಸಿದೆ.



ಜೂ.13ರಂದು ಸಂಜೆ 6 ಗಂಟೆಗೆ ಪಟ್ಟಣಕ್ಕೆ ಆಗಮಿಸಲಿರುವ ಸ್ವಾಮಿಜಿ ಪುರಪ್ರವೇಶವನ್ನು ಅದ್ದೂರಿಯಾಗಿ ಆಚರಿಸಲಾಗುವುದು. ಮೆರವಣಿಗೆ ಮೂಲಕ ದೇವಸ್ಥಾನಕ್ಕೆ ಕರೆದುಕೊಂಡು ಬರಲಾಗುವುದು ಎಂದು ಸಮಿತಿ ತಿಳಿಸಿದೆ. 14ರಂದು ಬೆಳಿಗ್ಗೆ ಬಂಧುಪುರೇಶನ ಮೂರ್ತಿಗೆ ಅಭಿಷೇಕ, ಹೋಮ ಸೇರಿದಂತೆ ವಿವಿಧ ಧಾರ್ಮಿಕ ಪೂಜಾ ಕಾರ್ಯಕ್ರಮಗಳು ನಡೆಯಲಿವೆ. ನಂತರ ಸ್ವಾಮೀಜಿಗಳಿಂದ ಆಶೀರ್ವಚನ ಹಮ್ಮಿಕೊಳ್ಳಲಾಗಿದೆ ಎಂದು ಸಮಿತಿ ಮುಖಂಡರು ತಿಳಿಸಿದ್ದಾರೆ. ಈ ಕಾರ್ಯಕ್ರಮದಲ್ಲಿ ಸ್ವಾಮೀಜಿಗಳು, ಶಾಸಕರು, ಮಾಜಿ ಶಾಸಕರು ಭಾಗವಹಿಸಲಿದ್ದಾರೆ ಎಂದು ಹೇಳಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# "ಕತ್ತಲಲ್ಲಿ ಹೊಕ್ರಾಣಿ ಗ್ರಾಮಸ್ಥರು"

❑ ನೈಜ್ಯ ದೆಸೆ ನ್ಯೂಸ್

ಸಿರವಾರ: ಸಮೀಪದ ಹೊಕ್ರಾಣಿ ಗ್ರಾಮದ ಪರಿಶಿಷ್ಟ ಜಾತಿ ಕಾಲೋನಿಯಲ್ಲಿ ಕಳೆದ ಒಂದು ವಾರದಿಂದ ವಿದ್ಯುತ್ ಸರಬರಾಜು ಸ್ಥಗಿತಗೊಂಡಿದ್ದು, ಗ್ರಾಮಸ್ಥರು ಕತ್ತಲಲ್ಲೇ ಜೀವನ ಸಾಗಿಸುವಂತಾಗಿದೆ. ವಿದ್ಯುತ್ ಪರಿವರ್ತಕ ದುರಸ್ತಿಗೆ ತೆಗೆದುಕೊಂಡು ಹೋಗದೆ ಜೆಸ್ಕಾಂ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವುದಾಗಿ ಗ್ರಾಮಸ್ಥರು ಆರೋಪಿಸಿದ್ದಾರೆ.

ಗ್ರಾಮದ ಪರಿಶಿಷ್ಟ ಜಾತಿ ಕಾಲೋನಿಗೆ ವಿದ್ಯುತ್ ಪೂರೈಸುತ್ತಿದ್ದ ಪರಿವರ್ತಕ ದೋಷಗೊಂಡು ವಾರ ಕಳೆದರೂ



ಅದನ್ನು ದುರಸ್ತಿಗೆ ಕೊಂಡೊಯ್ಯುವ ಅಥವಾ ಹೊಸ ಪರಿವರ್ತಕ ಅಳವಡಿಸುವ ಕ್ರಮ ಕೈಗೊಳ್ಳದ ಕಾರಣ ಸಮಸ್ಯೆ ಉಲ್ಬಣಗೊಂಡಿದೆ. ಟಿಸಿಗಳ ಕೊರತೆಯಿಂದ ವಿದ್ಯುತ್ ಸರಬರಾಜು ಪುನರಾರಂಭವಾಗದೆ ಜನರು ಸಂಕಷ್ಟ ಅನುಭವಿಸುತ್ತಿದ್ದಾರೆ. ವಿದ್ಯುತ್ ಇಲ್ಲದ ಕಾರಣ ಕುಡಿಯುವ ನೀರು ಹಾಗೂ ಗೃಹಬಳಕೆಯ ನೀರಿನ ಪೂರೈಕೆಯೂ ಅಸ್ತವ್ಯಸ್ತಗೊಂಡಿದ್ದು, ವಿದ್ಯಾರ್ಥಿಗಳು ಹಾಗೂ ವೃದ್ಧರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ರಾತ್ರಿ ವೇಳೆ ಸಂಪೂರ್ಣ ಕತ್ತಲೆ ಆವರಿಸಿರುವುದರಿಂದ ನಿವಾಸಿಗಳಲ್ಲಿ ಆತಂಕ ಮನೆ ಮಾಡಿದೆ.

ಇದೇ ವೇಳೆ ಹೊಸ ಟಿಸಿ ಅಳವಡಿಕೆಗೆ ಸಂಬಂಧಿಸಿದಂತೆ ಗ್ರಾಮದಲ್ಲಿ ಹಾಕಲಾಗಿರುವ ವಿದ್ಯುತ್ ಕಂಬ ಹಾಗೂ ಇತರ ಸಾಮಗ್ರಿಗಳು ಬಳಕೆಯಾಗದೆ ಬಿದ್ದಿದ್ದು, ಅವು ಜಾಲಿ ಗಿಡಗಳಿಂದ ಆವರಿಸಿಕೊಂಡಿವೆ. ಇದರಿಂದ ಇಲಾಖೆಯ ನಿರ್ಲಕ್ಷ್ಯ ಎದ್ದು ಕಾಣುತ್ತಿದೆ ಎಂದು ಗ್ರಾಮಸ್ಥರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ತಕ್ಷಣ ಹೊಸ ಟಿಸಿ ಅಳವಡಿಸಿ ವಿದ್ಯುತ್ ಸರಬರಾಜು ಪುನರಾರಂಭಿಸಬೇಕು. ಜೊತೆಗೆ ಪರಿವರ್ತಕ ಅಳವಡಿಕೆಯಲ್ಲಿ ಉಂಟಾದ ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಮನುಕುಲದ ಮನೋಧರ್ಮದ ದೇವಾಲಯವಾಗಿದೆ ಕಾರುಣ್ಯ ಕುಟುಂಬ – ಸಾಬಣ್ಣ ವಗ್ಗರ




❑ ನೈಜ್ಯ ದೆಸೆ ನ್ಯೂಸ್

ಸಿಂಧನೂರು: ಸಿಂಧನೂರು ತಾಲೂಕ ಪಂಚಾಯತ ಪಿ.ಎಂ. ಪೋಷಣ್ ಸಹಾಯಕ ನಿರ್ದೇಶಕರು ಹಾಗೂ ತಾಲೂಕಾ ಬಿಸಿಯೂಟದ ಅಧಿಕಾರಿಗಳಾದ ಸಾಬಣ್ಣ ವಗ್ಗರ ಅವರು ತಮ್ಮ 56ನೇ ವರ್ಷದ ಜನ್ಮ ಸಾರ್ಥಕ ದಿನವನ್ನು ಸಿಂಧನೂರು ನಗರದ ವಳಬಳ್ಳಾರಿ ರಸ್ತೆಯಲ್ಲಿರುವ ಕರ್ನಾಟಕ ಸರ್ಕಾರದ ರಾಜ್ಯ ಪ್ರಶಸ್ತಿ ಪುರಸ್ಕೃತ ಸಂಸ್ಥೆ ಯಾದ ಶ್ರೀಮಠ ಸೇವಾ ಟ್ರಸ್ಟ್ (ರಿ) ಹರೇಟನೂರು ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಆಹಾರ ವಸ್ತುಗಳನ್ನು ವಿತರಿಸಿ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸುವ ಮೂಲಕ ಅರ್ಥಪೂರ್ಣವಾಗಿ ಜನ್ಮ ಸಾರ್ಥಕ ದಿನದ ಕಾರ್ಯಕ್ರಮವನ್ನು ನೆರವೇರಿಸಿದರು.

ಈ ಕಾರ್ಯಕ್ರಮದಲ್ಲಿ ಆಶ್ರಮದ ವತಿಯಿಂದ ತಾಲೂಕ ಬಿಸಿಯೂಟದ ಅಧಿಕಾರಿಗಳಾದ ಸಾಬಣ್ಣ ವಗ್ಗರ ಹಾಗೂ ಸಿಂಧನೂರು ವಲಯದ ಕ್ಲಸ್ಟರ್ ಅಧಿಕಾರಿಗಳಾದ ಚನ್ನವೀರನಗೌಡ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ನಂತರ ಅಧಿಕಾರಿಗಳಾದ ಸಾಬಣ್ಣ ವಗ್ಗರ ಮಾತನಾಡಿ ಹುಟ್ಟು ಸಾವಿನ ಮಧ್ಯೆ ಮಾನವೀಯತೆಯ ಪಾಠಶಾಲೆಯಾಗಿದೆ ನಮ್ಮ ಕಾರುಣ್ಯಾಶ್ರಮ. ಸಮಾಜದಲ್ಲಿನ ಅದೆಷ್ಟೋ ನೆಲೆ ಇಲ್ಲದ ಹಿರಿಯರನ್ನು ಹಾಗೂ ವಯಸ್ಕರ ಬುದ್ಧಿಮಾಂದ್ಯರನ್ನು ರಕ್ಷಣೆ ಮಾಡುತ್ತಾ ಪ್ರತಿಯೊಬ್ಬರ ಮನೆ ಮನಸ್ಸಿನಲ್ಲಿದೆ.

ನಮ್ಮ ನಾಡಿನ ಹರ ಗುರು ಚರಮೂರ್ತಿಗಳ ಬಸವಾದಿ ಶರಣರ ಆಶಯದಂತೆ ಕಾರುಣ್ಯ ಆಶ್ರಮದ ಸೇವಾ ಕಾರ್ಯ ನೆರವೇರುತ್ತಿರುವುದು ನಮ್ಮ ಸಿಂಧನೂರಿನ ಘನತೆ ಗೌರವವನ್ನು ನಾಡಿಗೆ ತೋರಿಸಿಕೊಟ್ಟಂತಹ ಕೀರ್ತಿ ಕಾರುಣ್ಯ ಆಶ್ರಮಕ್ಕೆ ಸಲ್ಲುತ್ತದೆ. ಮನುಕುಲದ ಮನೋಧರ್ಮದ ದೇವಾಲಯವಾಗಿದೆ ಕಾರುಣ್ಯ ಕುಟುಂಬ. ಬಡಜಂಗಮರಾಗಿ ನಾಡಿಗೆ ಕರುಣೆಯ ಸಂಸ್ಕೃತಿಯನ್ನು ತೋರಿಸಿಕೊಟ್ಟಿರುವ ಹರೇಟನೂರಿನ ವೇದಮೂರ್ತಿ ಅಮರಯ್ಯ ಸ್ವಾಮಿಯವರು ಸಮಾಜದ ಬಹುದೊಡ್ಡ ಆಸ್ತಿಯಾಗಿದ್ದಾರೆ. ಈ ಸೇವೆಯಲ್ಲಿ ನಾವು ಆಡಳಿತಾತ್ಮಕವಾಗಿ ಮತ್ತು ವೈಯಕ್ತಿಕವಾಗಿ ನಿರಂತರ ಸಹಾಯ ಸಹಕಾರ ಮಾಡುತ್ತೇವೆ ಎಂದು ಮಾತನಾಡಿ ಆಶ್ರಮದ ಸೇವೆಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತಪಡಿಸಿದರು.

ಈ ಕಾರ್ಯಕ್ರಮದಲ್ಲಿ ಚನ್ನವೀರನಗೌಡ ಸಿ. ಆರ್. ಪಿ. ಸಿಂಧನೂರು ವಲಯ ಕ್ಲಸ್ಟರ್ ಅಧಿಕಾರಿಗಳು. ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ. ಆಶ್ರಮದ ಸದಸ್ಯರಾದ ಸುಜಾತ ಹಿರೇಮಠ ಮತ್ತು ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ. ಸಿದ್ದಯ್ಯ ಸ್ವಾಮಿ. ಮರಿಯಪ್ಪ. ಜ್ಯೋತಿ. ಹಾಗೂ ಅನೇಕರು ಉಪಸ್ಥಿತರಿದ್ದರು

# "ಉಭಯ ನಾಯಕರಿಂದ ವಿವಿಧ ಕಾಮಗಾರಿಗಳಿಗೆ ಚಾಲನೆ"

❑ ನೈಜ್ಯ ದೆಸೆ ನ್ಯೂಸ್

ಮಾನ್ವಿ: ತಾಲೂಕಿನ ಕರೇಗುಡ್ಡ ಗ್ರಾಮದಲ್ಲಿನ ಮಹಾಂತೇಶ್ವರ ಮಠದ ಆವರಣದಲ್ಲಿ ಶ್ರೀ ಮಹಾಂತೇಶ್ವರ ಮಹಾಸ್ವಾಮಿಗಳ ಮಠದಿಂದ ಗ್ರಾಮದ ಮಾರೆಮ್ಮ ಗುಡಿಯವರೆಗೆ 2025-26 ಕಾಲೋನಿ ಯೋಜನೆಯಡಿಯಲ್ಲಿ 10 ಲಕ್ಷ ವೆಚ್ಚದಲ್ಲಿ ಸಿ.ಸಿ.ರಸ್ತೆ ಹಾಗೂ ಹಿರೇಹಣಗಿ- ಹಿರೇಕೋಟ್ನೆಕಲ್ ಮುಖ್ಯ ರಸ್ತೆಯಲ್ಲಿ ಬರುವ ಕರೇಗುಡ್ಡ ಕ್ರಾಸಿನಿಂದ ಕರೇಗುಡ್ಡ ಗ್ರಾಮದಲ್ಲಿನ ಶ್ರೀ ಮಹಾಂತೇಶ್ವರ ಮಹಾಸ್ವಾಮಿಗಳ ಮಠದ ವರೆಗೆ ಸಂಪರ್ಕ ಕಲ್ಪಿಸುವ ರಸ್ತೆಗೆ ಡಾಂಬರೀಕರಣ 446 ಮೀ ರಸ್ತೆಯನ್ನು ಕೆ.ಕೆ.ಆರ್.ಡಿ.ಬಿ. ಮೈಕ್ರೋ ಯೋಜನೆಯಡಿಯಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಅಂದಾಜು 50 ಲಕ್ಷ ವೆಚ್ಚದಲ್ಲಿ ಕಾಮಗಾರಿಗೆ ಭೂಮಿ ಪೂಜೆ, ನೀರಮಾನ್ವಿ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆ ವತಿಯಿಂದ ಕೈಗೊಂಡಿರುವ ನೀರಮಾನ್ವಿಯಿಂದ ಹರವಿ ಗ್ರಾಮದವರೆಗೆ 1 ಕೋಟಿ 50 ಲಕ್ಷ ರೂಪಾಯಿಗಳ ರಸ್ತೆ ಡಾಂಬರೀಕರಣ ಕಾಮಗಾರಿಗೆ ಭೂಮಿ ಪೂಜೆ, ಕಪಗಲ್ ಗ್ರಾಮದಲ್ಲಿ



ರಾಯಚೂರು ಮಾನ್ವಿ ಮುಖ್ಯ ರಸ್ತೆಯಿಂದ ಗ್ರಾಮದ ಮಾರೆಮ್ಮ ಗುಡಿಯವರಿಗೆ ಸುಮಾರು 1 ಕೋಟಿ ರೂಪಾಯಿ ವೆಚ್ಚದ ರಸ್ತೆ ಡಾಂಬರೀಕರಣ ಹಾಗೂ 10 ಲಕ್ಷ ರೂಪಾಯಿ ವೆಚ್ಚದಲ್ಲಿ ಅಂಗನವಾಡಿ ಕೇಂದ್ರದ ಕಟ್ಟಡದ ಭೂಮಿ ಪೂಜೆ ಕಾಮಗಾರಿಯನ್ನು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್. ಎಸ್ ಬೋಸುರಾಜ್ ಹಾಗೂ ಮಾನ್ವಿ ಶಾಸಕರಾದ ಜಿ. ಹಂಪಯ್ಯ ನಾಯಕ ಇವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಸ್ಥಳದಲ್ಲಿದ್ದ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಾದ ನಬಿರಸೂಲ್, ಮಕ್ಸುದ್ ಅಲಿ, ನಿರ್ಮಿತಿ ಕೇಂದ್ರ ಹಾಗೂ ಲ್ಯಾಂಡ ಆರ್ಮಿ ಅಧಿಕಾರಿಗಳಿಗೆ ಕಾಮಗಾರಿಯನ್ನು ಉತ್ತಮ ಗುಣಮಟ್ಟದಿಂದ ಆದಷ್ಟು ಬೇಗನೆ ಪ್ರಾರಂಭಿಸಿ ಸಾರ್ವಜನಿಕರಿಗೆ ಅನುಕೂಲಕರವಾಗುವ ರೀತಿಯಲ್ಲಿ ಕಾಮಗಾರಿಯನ್ನು ಮುಗಿಸಲು ಸೂಚಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಯುವ ಮುಖಂಡರಾದ ಮುಸ್ತಫ ಸಾಹುಕಾರ್ ಇವರ ನಿವಾಸಕ್ಕೆ ಭೇಟಿ ನೀಡಿದರು. ಕಪಗಲ್ ಗ್ರಾಮದಲ್ಲಿ ನಡೆಯುತ್ತಿರುವ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕೆರೆಯ ಕಾಮಗಾರಿಗೆ ಸಂಬಂಧಪಟ್ಟಂತೆ ರೈತರು ದೂರನ್ನು ನೀಡಿದಾಗ ಕೂಡಲೇ ತಹಸೀಲ್ದಾರರಿಗೆ ದೂರವಾಣಿ ಮುಖಾಂತರ ರೈತರಿಗೆ ಆಗುತ್ತಿರುವ ಅನಾನುಕೂಲತೆಯ ಬಗ್ಗೆ ನಾಳೆ ಸ್ಥಳಕ್ಕೆ ಆಗಮಿಸಿ ಸರಿಪಡಿಸಲು ಸೂಚಿಸಿದರು.

ಈ ಕಾರ್ಯಕ್ರಮದಲ್ಲಿ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮೀಜಿ, ಮುಖಂಡರಾದ ರುದ್ರಪ್ಪ ಅಂಗಡಿ, ಬಸವರಾಜ ಪಾಟೀಲ ಅತ್ತನೂರು, ಅಮರೇಗೌಡ ಹಂಚಿನಾಳ, ರಾಜಾ ಸುಭಾಷಚಂದ್ರ ನಾಯಕ್, ರಾಜಶೇಖರ್ ಪಾಟೀಲ್ ಜಾನೇಕಲ್, ಅಂಬಣ್ಣ ಪಾಟೀಲ್, ಬಸವಲಿಂಗಪ್ಪ ಗೌಡ, ದೊಡ್ಡ ಬಸಪ್ಪ, ಚಂದ್ರಪ್ಪ ಸಾಹುಕಾರ ಬ್ಯಾಗವಾಟ, ರಂಗನಾಥ ನಾಯಕ್, ಶಿವು, ಮಹಾಂತೇಶ ನಕ್ಕುಂಡಿ, ಚನ್ನಬಸವ ನಾಯಕ್, ಬುಡ್ಡಪ್ಪ, ಶಂಕರ ದೊರೆಕ್ಷಾಂತ ತಳವಾರ, ಜೇ. ಗೋಪಾಲ ನಾಯಕ, ಚನ್ನಪ್ಪ ಗೌಡ ಬೆಟ್ಟದೂರು, ಕರಿಯಪ್ಪ ನಾಯಕ ಕಪಗಲ್, ಸೈಯದ್ ಮುಸ್ತಾಫ್ ಸಾಹುಕಾರ, ವಕೀಲರಾದ ಗೋವಿಂದರಾಜು, ಶಂಕರ್ ಗೌಡ ಮಾ.ಪಾ, ನಾಗನಗೌಡ ಬೊಮ್ಮನಾಳ, ಸಣ್ಣ ಯಲ್ಲಯ್ಯ ನಾಯಕ್, ದೊಡ್ಡ ಯಲ್ಲಯ್ಯ ನಾಯಕ್, ಚಂದಪ್ಪ ನಾಯಕ್, ಗೋವಿಂದಪ್ಪ ನಾಯಕ್, ಉತ್ತರಬೂಪ ಮಾದೇವ ನಾಯಕ್, ನರಸಣ್ಣ ನಾಯಕ್, ಕಲ್ಲೂರು ಮಾಣಿಕ್ಯ ಶೆಟ್ಟಿ, ಸಿಕಲ್ ಈಶಪ್ಪ, ಸುಂದರ ಕಪಗಲ್, ಮೈಬೂಬ್ ಕಪಗಲ್, ಬಸಪ್ಪ ನಾಯಕ್, ವೀರೇಶ ನಾಯಕ್, ರಾಜು ಸುಲ್ತಾನ್, ವಿಶ್ವನಾಥ್ ನಾಯಕ್, ಶ್ರೀನಿವಾಸ್ ನಾಯಕ್, ನಾಗರಾಜ್ ಬೊಮ್ಮನಾಳ್, ಶಿವಪ್ಪ ನಾಯಕ್, ಶಿವರಾಯ, ಮಾದೇವ ಉಪಸ್ಥಿತರಿದ್ದರು.

# ನೇಮಕಾತಿ ಪ್ರಕಟಣೆ

**ISRO URSC ನೇಮಕಾತಿ 2026 ? 17 ಜೂನಿಯರ್ ರಿಸರ್ಚ್ ಫೆಲೋ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ ಜೂನ್ 12, 2026**

ISRO URSC ನೇಮಕಾತಿ 2026: 17 ಜೂನಿಯರ್ ರಿಸರ್ಚ್ ಫೆಲೋ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಯು ಆರ್ ರಾವ್ ಸ್ಯಾಟಲೈಟ್ ಸೆಂಟರ್ ಜೂನ್ 2026 ರ ಇಸ್ರೋ URSC ಅಧಿಕೃತ ಅಧಿಸೂಚನೆಯ ಮೂಲಕ ಜೂನಿಯರ್ ರಿಸರ್ಚ್ ಫೆಲೋ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಬೆಂಗಳೂ-ರಿನಲ್ಲಿ – ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 11–ಜುಲೈ–2026 ರಂದು ಅಥವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 12–06–2026

ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 11–ಜುಲೈ–2026

ಅಧಿಕೃತ ವೆಬ್‌ಸೈಟ್: isro.gov.in

# "ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ಮಾಡಿದ ಉಭಯ ನಾಯಕರು"

ನೈಜ್ಯ ದೆಸೆ ನ್ಯೂಸ್

**ಸಿರವಾರ: ರಾಜ್ಯ ಹೆದ್ದಾರಿಯಾಗಿ ಮೇಲ್ದರ್ಜೆಗೆ ಏರಿಸಲಾದ ತಾಲೂಕಿನ ಬಾಗಲವಾಡದಿಂದ ಮಾನ್ವಿಗೆ ಹೋಗುವ ಮುಖ್ಯ ರಸ್ತೆಯ ಶಿಥಿಲಗೊಂಡ ಸೇತುವೆಯಿಂದ ಭಾರಿ ವಾಹನಗಳ ಓಡಾಟಕ್ಕೆ ಅನುಕೂಲ ಕಲ್ಪಿಸುವ ಉದ್ದೇಶದಿಂದ 1 ಕೋಟಿ 50ಲಕ್ಷ ರೂಪಾಯಿ ನೀಡಲಾಗಿದೆ ಎಂದು ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್. ಎಸ್.ಭೋಸರಾಜು ಹಾಗೂ ಮಾನ್ವಿ ಶಾಸಕ ಹಂಪಯ್ಯ ನಾಯಕ ಜಂಟಿಯಾಗಿ ಹೇಳಿದರು.**

ಅವರು ಗುರುವಾರ ತಾಲೂಕಿನ ಬಾಗಲವಾಡ ಮಾನ್ವಿ ರಸ್ತೆಯ ಮೇಲೆ ಸೇತುವೆ, ಲಕ್ಷ್ಮೀ ಕ್ಯಾಂಪ್ ನಲ್ಲಿ 10 ಲಕ್ಷ ರೂಪಾಯಿ ಸಿಸಿ ರಸ್ತೆ, ಹುಸೇನಪುರ ಗ್ರಾಮದಲ್ಲಿ ಚರಂಡಿ ಹಾಗೂ ರಸ್ತೆ ನಿರ್ಮಾಣ, ಅಂಗನವಾಡಿ ಕೇಂದ್ರದ ಕಟ್ಟಡ ನಿರ್ಮಾಣ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ



ನೀಡಿ ನಂತರ ಹುಸೇನಪುರದಲ್ಲಿ ಗುರುವಾರ ಲೋಕೋಪಯೋಗಿ ಇಲಾಖೆಯಿಂದ ಅಂ-ದಾಜು ?1.4 ಕೋಟಿ ವೆಚ್ಚದಲ್ಲಿ ಚರಂಡಿ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದರು. ?20 ಲಕ್ಷ ಮೊತ್ತದಲ್ಲಿ ಅಂಗನವಾಡಿ ಕಟ್ಟಡ ನಿರ್ಮಾಣ, ಹಿರೇಹಣಿಗಿ ಗ್ರಾಮದಲ್ಲಿ ?10 ಲಕ್ಷ ಮೊತ್ತದಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ, ?15 ಲಕ್ಷ ವೆಚ್ಚದಲ್ಲಿ ಕನಕ ಭವನದ ಅಭಿವೃದ್ಧಿ, ಬಾಗಲವಾಡ ಗ್ರಾಮದಲ್ಲಿ ?10 ಲಕ್ಷ ವೆಚ್ಚದಲ್ಲಿ ಕಾಂಕ್ರೀಟ್ ರಸ್ತೆ ಮತ್ತು ರಾಜ್ಯ ಹೆದ್ದಾರಿ 128ರಲ್ಲಿ ?1.5 ಕೋಟಿ ಮೊತ್ತದಲ್ಲಿ ಬಾಕ್ಸ್ ಕಲ್ವರ್ಟ್ ನಿರ್ಮಾಣ ಕಾಮಗಾ-ರಿಗಳಿಗೆ ಚಾಲನೆ ನೀಡಲಾಗಿದೆ' ಎಂದರು.

ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಕಿರಿಲಿಂಗಪ್ಪ, ಅಮರೇಗೌಡ ಹಂಚಿನಾಳ, ರುದ್ರಪ್ಪ ಅಂಗಡಿ, ಬಸವರಾಜ ಪಾಟೀಲ್ ಅತ್ತನೂರು, ಗ್ರಾ.ಪಂ. ಮಾಜಿ ಅಧ್ಯಕ್ಷ ತಿಪ್ಪಣ್ಣ ಬಾಗಲವಾಡ, ತಿಪ್ಪಯ್ಯಸ್ವಾಮಿ, ಮೆಹಬೂಬಸಾಬ್, ವೀರಭದ್ರಪ್ಪ, ಅಯ್ಯಪ್ಪ ನಿಲೋಗಲ್, ಶಿವಣ್ಣ ವಕೀಲ, ದೇವಪ್ಪ ನಾಯಕ, ಅಲ್ಲಮಪ್ರಭು, ರಾಜೇಶ ಬನ್ನಿಗಿಡದ ದೇವಪ್ಪ ಹುಸೇನಪುರ, ಶರಣು ಸಾಹು ಕಾರ ಚಿಂಚರಕಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರೈತರ ಹಿತ ಕಾಯಲು ಸರಕಾರ ಮುಂದಾಗಬೇಕು: ಡಾ. ಬಾಬುರಾವ್

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಮುಂಗಾರು ಆರಂಭವಾಗಿದ್ದು, ಜಿಲ್ಲೆಯಲ್ಲಿ ಮಳೆ ಅಬ್ಬರಿಸಲು ಪ್ರಾರಂಭಿಸಿದ್ದು ರೈತರ ಮುಖದಲ್ಲಿ ಮಂದಹಾಸ ಮೂಡಿದೆ. ಸರಕಾರ ಕೂಡಲೇ ರೈತರಿಗೆ ಅಗತ್ಯವಾದ ಬಿತ್ತನೆ ಬೀಜ ಹಾಗೂ ಸಮರ್ಪಕವಾಗಿ ರಸಗೊಬ್ಬರನ್ನು ಪೂರೈಸಬೇಕೆಂದು ಎಪಿಎಂಸಿ ಮಾಜಿ ಉಪಾಧ್ಯಕ್ಷ ಡಾ.ಬಾಬುರಾವ್ ಆಗ್ರಹಿಸಿದ್ದಾರೆ.**



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, , ಜಿಲ್ಲೆಯ ರೈತರು ಬಿತ್ತನೆ ಕಾರ್ಯಕ್ಕೆ ಸಿದ್ಧತೆ ನಡೆಸುತ್ತಿದ್ದಾರೆ. ಆದರೆ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರಗಳು ಲಭ್ಯವಾಗುತ್ತಿಲ್ಲ. ಕೆಲವು ಮಾರಾಟಗಾರರು ಲಭ್ಯವಿರುವ ಬೀಜ ಮತ್ತು ಗೊಬ್ಬರವನ್ನು ಸಂಗ್ರಹಿಸಿ ಕೃತಕ ಅಭಾವ ಸೃಷ್ಟಿಸಿ, ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಬರುತ್ತಿವೆ. ಆದ್ದರಿಂದ ಜಿಲ್ಲಾಡಳಿತ ಕೂಡಲೇ ಮಧ್ಯಪ್ರವೇಶಿಸಿ ರೈತ-ರಿಗೆ ಅಗತ್ಯಕ್ಕೆ ಅನುಗುಣವಾಗಿ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳನ್ನು ಎಂ.ಆರ್.ಪಿ. ದರದಲ್ಲಿ ಸಮರ್ಪಕವಾಗಿ ಪೂರೈಸಲು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದ್ದಾರೆ. ಕೃಷಿ ಅಧಿಕಾರಿಗಳು ಬಿತ್ತನೆ ಬೀಜ ಹಾಗು ರಸಗೊಬ್ಬರ ಮಾರಾಟ ಮಳಿಗೆಯಲ್ಲಿ ರೈತರಿಗೆ ಸಮರ್ಪಕವಾಗಿ ಬೀಜ ಗೊಬ್ಬರ ದೊರೆಯುತ್ತಿದೆಯೇ ಎನ್ನುವುದನ್ನು ಖಚಿತಪಡಿಸಿಕೊಳ್ಳಬೇಕು. ಹಾಗೂ ರೈತರಿಗೆ ಬೇಕಾದ ಗೊಬ್ಬರವನ್ನಷ್ಟೇ ಕೊಡುವಂತೆ ಸೂಚಿಸಬೇಕು. ರೈತರು ಕೊಳ್ಳುವ ಗೊಬ್ಬರದ ಜೊತೆ ಇತರ ಔಷಧಿ ಹಾಗೂ ಗೊಬ್ಬರಗಳನ್ನು ಲಿಂಕ್ ಮಾಡುವವರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

# ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಮುಖ್ಯ ಕಾರ್ಯದರ್ಶಿಗಳ ಖಡಕ್ ಆದೇಶ ನೌಕರರ ಸಂಘದ ಹೋರಾಟಕ್ಕೆ ಸಂದ ಜಯ: ಮಹೇಶ್ ಹುಬ್ಬಳ್ಳಿ


ನೈಜ್ಯ ದೆಸೆ ನ್ಯೂಸ್

**ದೇವದುರ್ಗ: ರಾಜ್ಯದ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡುವಂತೆ ಮುಖ್ಯ ಕಾರ್ಯದರ್ಶಿಗಳು ಆದೇಶ ಹೊರಡಿಸಿರುವುದು ಕರ್ನಾಟಕ ರಾಜ್ಯ ಸರ್ಕಾರಿ, ಅರೆ ಸರ್ಕಾರಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ನೌಕರರ ಸಂಘದ ನಿರಂತರ ಹೋರಾಟಕ್ಕೆ ಸಂದ ಮಹತ್ವದ ಜಯವಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಮಹೇಶ್ ಹುಬ್ಬಳ್ಳಿ ತಿಳಿಸಿದ್ದಾರೆ.**

ಪತ್ರಿಕಾ ಪ್ರಕಟಣೆಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕ ವಿಭಾಗೀಯ ಮಟ್ಟದ ಸಮಾವೇಶದಲ್ಲಿ ಅಂಗೀಕರಿಸಲಾದ ವಿವಿಧ ಬೇಡಿಕೆಗಳ ಈಡೇರಿಕೆಗೆ ಸಂಬಂಧಿಸಿದಂತೆ ಮುಖ್ಯಮಂತ್ರಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಚಿವರು, ಶಾಸಕರು ಹಾಗೂ ಹಿರಿಯ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಲಾಗಿತ್ತು ಎಂದು ತಿಳಿಸಿದರು. ಸಂಘದ ನಿರಂತರ ಹೋರಾಟ ಮತ್ತು ಮನವಿಗಳಿಗೆ ಸ್ಪಂದಿಸಿದ ರಾಜ್ಯ ಸರ್ಕಾರವು ಮೇ



25, 2026ರಂದು ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ತುರ್ತು ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರ ಮೂಲಕ ಆದ-ೇಶ ಹೊರಡಿಸಿರುವುದು ಸಂತಸ ತಂದಿದೆ ಎಂದು ಅವರು ಹೇಳಿದರು.



ಸರ್ಕಾರ ಸಾಮಾಜಿಕ ನ್ಯಾಯದತ್ತ ಮಹತ್ವದ ಹೆಜ್ಜೆ ಇಟ್ಟಿದ್ದು, ಮೀಸಲಾತಿ ಆಧಾರಿತ ಬಡ್ತಿ, ಎಸ್‌ಸಿ/ಎಸ್‌ಟಿ ನೌಕರರ ಮೇಲಿನ ದೌರ್ಜನ್ಯಗಳ ತನಿಖೆ, ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿ, ಅನುಕಂಪ ಆಧಾರಿತ ನೇಮಕಾತಿಗಳ ಜಾರಿ ಸೇರಿದಂತೆ ಹಲವು ಬೇಡಿಕೆಗಳನ್ನು ಸರ್ಕಾರದ ಮುಂದಿಟ್ಟಿರುವುದಾಗಿ ತಿಳಿಸಿದರು.

ಇದಲ್ಲದೆ ಎಸ್‌ಸಿ/ಎಸ್‌ಟಿ ನೌಕರರಿಗೆ ಗೃಹ ಸಾಲ ಮುಂಗಡ ಸೌಲಭ್ಯ ಹಾಗೂ ಉನ್ನತ ವ್ಯಾಸಂಗಕ್ಕಾಗಿ

**"ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿಗೆ ಮುಖ್ಯ ಕಾರ್ಯದರ್ಶಿಗಳ ಆದೇಶ ಸಂತಸದ ವಿಚಾರ. ಇದು ನೌಕರರ ಸಂಘದ ಹೋರಾಟಕ್ಕೆ ಸಂದ ಜಯವಾಗಿದ್ದು, ಸಾವಿರಾರು ನಿರುದ್ಯೋಗಿ ಯುವಕರಿಗೆ ಆಶಾಕಿರಣವಾಗಿದೆ. ಸರ್ಕಾರ ಶೀಘ್ರದಲ್ಲೇ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳಿಸಲಿ." ಎಂದು ರಾಜ್ಯ ಘಟಕದ ಪದಾಧಿಕಾರಿ ಡಿ. ರಾಜಕುಮಾರ್ ಸಂತಸ ವ್ಯಕ್ತಪಡಿಸಿದರು.**

ವೇತನ ಸಹಿತ ರಜೆ ನೀಡುವಂತೆ ಸರ್ಕಾರವನ್ನು ಒತ್ತಾಯಿಸಲಾಗಿದೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸಭೆಗಳನ್ನು ನಡೆಸಿ ಬೇಡಿಕೆಗಳ ಈಡೇರಿಕೆಗೆ ರಾಜ್ಯಮಟ್ಟದ ಹೋರಾಟ ರೂಪಿಸಲಾಗುವುದು ಎಂದು ಮಹೇಶ್ ಹುಬ್ಬಳ್ಳಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಘಟಕದ ಪದಾಧಿಕಾರಿ ಡಿ. ರಾಜಕುಮಾರ್ ಅವರು, ಸರ್ಕಾರ ಹಾಗೂ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರಿಗೆ ಸಂಘದ ಪರವಾಗಿ ಹಾಗೂ ವೈಯಕ್ತಿಕವಾಗಿ ಕೃತಜ್ಞತೆ ಸಲ್ಲಿಸಿದರು.

**1ನೇ ಪುಟದಿಂದ....**

ಹಿನ್ನೆಲೆಯಲ್ಲಿ ಈಗ ರಾಜ್ಯದ ಎಲ್ಲ ಸರ್ಕಾರಿ ಇಲಾಖೆಗಳಿಗೂ ವಿಸ್ತರಿಸಲಾಗಿದೆ.

ಮುಖ್ಯ ಕಾರ್ಯದರ್ಶಿ ಕಟ್ಟುನಿಟ್ಟಿನ ಸೂಚನೆ : ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಎಲ್ಲ ಅಧಿಕಾ-ರಿಗಳು ಹಾಗೂ ಸಿಬ್ಬಂದಿ ಬೆಳಿಗ್ಗೆ 10 ಗಂಟೆಯೊಳಗೆ ಕಚೇರಿಗೆ ಹಾಜರಾಗಿ ಕರ್ತವ್ಯ ಆಪ್‌ನಲ್ಲಿ ಹಾಜರಾತಿ ದಾಖಲಿಸಬೇಕು ಎಂದು ಸೂಚಿಸಿದ್ದಾರೆ. ಹಾಜರಾತಿ ದಾಖಲಿಸದ ನೌಕರರ ಕು-ರಿತು ವರದಿ ಸಲ್ಲಿಸಲಾಗುವುದು ಎಂದೂ ಎಚ್ಚರಿಕೆ ನೀಡಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಧಿಕಾರ ಸ್ವೀಕರಿಸಿದ ಬಳಿಕ ನಡೆದ ಮೊದಲ ಹಿರಿಯ ಅಧಿಕಾರಿಗಳ ಸಭೆಯಲ್ಲೇ ಸರ್ಕಾರಿ ನೌಕರರು ಸಮಯ ಪಾಲನೆ ಕಡ್ಡಾಯವಾಗಿ ಮಾಡಬೇಕು ಎಂದು ಸೂಚಿಸಿದ್ದರು. ಅದರ ಬೆನ್ನಲ್ಲೇ ಸರ್ಕಾರ ಈ ಹೊಸ ಡಿಜಿಟಲ್ ಹಾಜರಾತಿ ವ್ಯವಸ್ಥೆಯನ್ನು ರಾಜ್ಯಾದ್ಯಂತ ಜಾರಿಗೆ ತಂದಿದೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಬೈಕ್ ಕಳ್ಳರ ಗ್ಯಾಂಗ್‌ಗೆ ಬಳಗಾನೂರು ಪೊಲೀಸರ ಬ್ರೇಕ್..! 35ಲಕ್ಷ 20ಸಾವಿರ ಮೌಲ್ಯದ 50 ಬೈಕ್‌ಗಳ ಜಪ್ತಿ

ನೈಜ್ಯ ದೆಸೆ ನ್ಯೂಸ್

**ಬಳಗಾನೂರು, ಜೂನ್ 12: ಬೈಕ್ ಕಳ್ಳತನ ಪ್ರಕರಣವೊಂದನ್ನು ಭೇದಿಸುವಲ್ಲಿ ಬಳಗಾನೂರು ಪೊಲೀಸರು ಗಮನಾರ್ಹ ಯಶಸ್ಸು ಸಾಧಿಸಿದ್ದು, ಐವರು ಆರೋಪಿಗಳನ್ನು ಬಂಧಿಸಿ 35 ಲಕ್ಷ 20 ಸಾವಿರ ರೂಪಾಯಿ ಮೌಲ್ಯದ 50 ಮೋಟಾರ್ ಸೈಕಲ್‌ಗಳನ್ನು ವಶಪಡಿಸಿಕೊಂಡಿದ್ದಾರೆ.**

2026ರ ಜನವರಿ 30ರಂದು ಮಧ್ಯರಾತ್ರಿ ವೇಳೆ ಹನುಮನಗೌಡ ಕ್ಯಾತನಟ್ಟಿ ಅವರ ಮನೆಯ ಮುಂದೆ ನಿಲ್ಲಿಸಿದ್ದ ರಾಯಲ್ ಎನ್‌ಫೀಲ್ಡ್ ಬೈಕ್ (ಕೆಎ–01 ಜೆಎ–6770) ಕಳ್ಳತನವಾಗಿತ್ತು. ಈ ಸಂಬಂಧ ಬಳಗಾನೂರು ಪೊಲೀಸ್ ಠಾಣೆಯಲ್ಲಿ ಗುನ್ನೆ ಸಂಖ್ಯೆ 21/2026ರಡಿ ಪ್ರಕರಣ ದಾಖಲಾಗಿ-ತ್ತು.ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾ ಪೊಲೀಸ್ ಇಲಾಖೆ, ರಾಯಚೂರು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಅರುಣಾಂಶು ಗಿರಿ ಐಪಿಎಸ್ ಅವರ ಮಾರ್ಗದರ್ಶನದಲ್ಲಿ ವಿಶೇಷ ತನಿಖಾ ತಂಡವನ್ನು ರಚಿಸಿತು. ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಸ್. ಜೆ. ಕುಮಾರಸ್ವಾಮಿ ಹಾಗೂ ಜಿ. ಹರೀಶ್,



ಸಿಂಧನೂರು ಉಪ ವಿಭಾಗದ ಪೊಲೀಸ್ ಉಪಾಧೀಕ್ಷಕರಾದ ಜಿ. ಚಂದ್ರಶೇಖರ ಅವರ ನಿರ್ದೇಶನದಂತೆ ಸಿಂಧನೂರು ಗ್ರಾಮೀಣ ವೃತ್ತದ ಸಿಪಿಐ ವಿನಾಯಕ ಅವರ ನೇತೃತ್ವದಲ್ಲಿ ಬಳಗಾನೂರು ಪೊಲೀಸ್ ಠಾಣೆಯ ಪಿಎಸ್ಐ ಎರಿಯಪ್ಪ ಅಂಗಡಿ ಹಾಗೂ ಸಿಬ್ಬಂದಿ ಕಾರ್ಯಾಚರಣೆ ಕೈಗೊಂಡರು.

ತಂಡದ ನಿರಂತರ ಪರಿಶ್ರಮದ ಫಲವಾಗಿ ಚನ್ನಬಸವ ಹೂಗಾರ, ರಾಘವೇಂದ್ರ ಅಲಿಯಾಸ್ ಗಿಂಡಿ ರಾಘು, ಮಹೇಬೂಬ್ (ಮಸ್ಕಿ), ಮಹಮ್ಮದ್ ಲಾಲ್ (ಪರಾಪೂರು) ಹಾಗೂ ರಫೀಕ್ (ವಿರುಪಾಪೂರು, ಆಂಧ್ರ ಪ್ರದೇಶ) ಎಂಬ ಐವರು ಆರೋಪಿಗಳನ್ನು ಬಂಧಿಸಲಾಯಿತು.ವಿಚಾರಣೆ ವೇಳೆ ಆರೋಪಿಗಳಿಂದ ವಿವಿಧೆಡೆ ಕಳುವಾಗಿದ್ದ 50 ಮೋಟಾರ್ ಸೈಕಲ್‌ಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಅವುಗಳ ಒಟ್ಟು ಮೌಲ್ಯ 35.20 ಲಕ್ಷ ರೂಪಾಯಿ ಎಂದು



ಅಂದಾಜಿಸಲಾಗಿದೆ. ಜಿಲ್ಲಾ ಪೊಲೀಸ್ ಅಧೀಕ್ಷಕರು ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪತ್ರಿಕಾಗೋಷ್ಠಿ ನಡೆಸುವ ಮೂಲಕ ಮಾಹಿ ನೀಡಿದ್ದಾರೆ.

ಬಳಗಾನೂರು ಪೊಲೀಸರ ಈ ಕಾರ್ಯಾಚರಣೆ ಜಿಲ್ಲೆಯಾದ್ಯಂತ ಪ್ರಶಂಸೆಗೆ ಪಾತ್ರವಾಗಿದ್ದು, ಪ್ರಕರಣವನ್ನು ಯಶಸ್ವಿಯಾಗಿ ಭೇದಿಸಿದ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಜಿಲ್ಲಾ ಪೊಲೀಸ್ ಅಧೀಕ್ಷಕರು ಶ್ಲಾಘಿಸಿದ್ದಾರೆ. ಕಳ್ಳರ ಜಾಲವನ್ನು ಭೇದಿಸಿ ಅಪಾರ ಪ್ರಮಾಣದ ವಾಹನಗಳನ್ನು ವಶಪಡಿಸಿಕೊಂಡಿರುವುದು ಬಳಗಾನೂರು ಪೊಲೀಸರ ದಕ್ಷತೆ ಮತ್ತು ತನಿಖಾ ಸಾಮರ್ಥ್ಯಕ್ಕೆ ಸಾಕ್ಷಿಯಾಗಿದೆ.

# ಶಾಸಕ ಡಾ.ಅಜಯಸಿಂಗಗೆ ಸಚಿವ ಸ್ಥಾನ ನೀಡಲು ಒತ್ತಾಯ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ಜೇವರ್ಗಿ ಮತಕ್ಷೇತ್ರದ ಶಾಸಕ ಮಾಜಿ ಮುಖ್ಯಮಂತ್ರಿ ಧರ್ಮಸಿಂಗ್ ಅವರ ಪುತ್ರರಾದ ಡಾ.ಅಜಯಸಿಂಗ್ ಅವರಿಗೆ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಮಂತ್ರಿಮಂಡಲದಲ್ಲಿ ಸಚಿವ ಸ್ಥಾನ ನೀಡಲೇಬೇಕು ಇಲ್ಲವಾದರೆ ಬರುವ ದಿನಗಳಲ್ಲಿ ಉಗ್ರವಾದ ಹೋರಾಟ ನಡೆಸಬೇಕಾಗುತ್ತದೆ ಎಂದು ರಜಪೂತ ಸಮಾಜದ ಯುವ ಮುಖಂಡ ವಿಜಯಸಿಂಗ್ ಹಜೇರಿ ಕಾಂಗ್ರೆಸ್ ಹೈಕಮಾಂಡ್‌ಗೆ ಎಚ್ಚರಿಸಿದರು.**

ಶುಕ್ರವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ರಜಪೂತ ಸಮಾಜದ ವತಿಯಿಂದ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 45 ವರ್ಷಗಳವರೆಗೆ ಕಾಂಗ್ರೆಸ್ ಪಕ್ಷದಲ್ಲಿ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷದ ವಿವಿಧ ಹುದ್ದೆಗಳನ್ನು



ಅಲಂಕರಿಸಿ ಪಕ್ಷಕ್ಕೆ ಅಪಾರ ಕೊಡುಗೆಯನ್ನು ಮಾಜಿ ಮುಖ್ಯಮಂತ್ರಿ ದಿವಂಗತ ಧರ್ಮಸಿಂಗ್ ಅವರು ಕೊಟ್ಟಿದ್ದಾರೆ. ಇದೀಗ ಅವರ ಪುತ್ರರಾದ ಅಜಯಸಿಂಗ್ ಅವರು ಮೂರು ಅವಧಿಗೆ ಶಾಸಕರಾಗಿ, ದೆಹಲಿ ವಿಶೇಷ ಪ್ರತಿನಿಧಿಯಾಗಿ ಸಾಕಷ್ಟು ಕೆಲಸ ಮಾಡಿದ ಅನುಭವ ಹೊಂದಿದವರಾಗಿದ್ದಾರೆ ಅವರನ್ನು ಈ ಮೊದಲೇ ಸಚಿವ ಸ್ಥಾನ ನೀಡುವುದಾಗಿ ರಾಜ್ಯಮಟ್ಟದ ನಾಯಕರು ತಿಳಿಸಿದ್ದರೂ ಇಲ್ಲಿವರೆಗೆ ವಚನ ಪಾಲಿಸಲಿಲ್ಲ ಬರಲಿರುವ ಸಂಪುಟದ ವಿಸ್ತರಣೆಯಲ್ಲಿ ಅವರಿಗೆ ಸಚಿವ ಸ್ಥಾನ ನೀಡದೇ ಹೋದಲ್ಲಿ ರಾಜ್ಯಾದ್ಯಂತ ನಮ್ಮ ಸಮಾಜದ ವತಿಯಿಂದ ಉಗ್ರವಾದ ಹೋರಾಟವನ್ನು ನಡೆಸಲಾಗುವುದು ಎಂದು ತಿಳಿಸಿದರು.

ಸಮಾಜದ ಪ್ರಮುಖರಾದ ಭರತಸಿಂಗ್ ವಿಜಾಪುರ, ಸುರೇಶ ಹಜೇರಿ, ಗೋವಿಂದಸಿಂಗ್ ಮೂಲಿಮನಿ ಹಾಗೂ ನವೀನ್ ಗೌಡಗೇರಿ ಅವರು ಮಾತನಾಡಿ ರಜಪೂತ ಸಮಾಜ ಅಲ್ಪಸಂಖ್ಯಾತ ಸಮಾಜವಾಗಿದೆ. ನಮಗೆ ರಾಜಕೀಯ ಪ್ರಾತಿನಿಧ್ಯ ಸಿಕ್ಕಾಗ ಮಾತ್ರ ಸಮಾಜವನ್ನು ಮುಖ್ಯ ವಾಹಿನಿಗೆ ತರಲು ಸಾಧ್ಯವಾಗುತ್ತದೆ ಇದು ನಮ್ಮ ಹಕ್ಕಾಗಿದೆ ಅದನ್ನು ನಮಗೆ ಕೊಡಿ ಎಂದು ಕೇಳುತ್ತಿದ್ದೇವೆ ಪಕ್ಷದ ವರಿಷ್ಠರು ಕೊಟ್ಟ ಭರವಸೆಯಂತೆ ನಡೆದುಕೊಂಡು ಅಜಯಸಿಂಗ್ ಅವರಿಗೆ ಸಚಿವ ಸ್ಥಾನ ಕೊಡಬೇಕು ಇಲ್ಲದಿದ್ದಲ್ಲಿ ಹೋರಾಟ ನಡೆಸುವುದು ಅನಿವಾರ್ಯವಾಗುತ್ತದೆ ಎಂದರು.

ಸುದ್ದಿಗೋಷ್ಠಿಯಲ್ಲಿ ರಜಪೂತ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ,ಉಪಾಧ್ಯಕ್ಷ ರತನಸಿಂಗ್ ಕೊಕಟನೂರ, ಗೋವಿಂದಸಿಂಗ್ ಗೌಡಗೇ-ರಿ,ಬಾಬು ಹಜೇರಿ, ಜೈಸಿಂಗ್ ಮೂಲಿಮನಿ, ರಘುಸಿಂಗ್ ಹಜೇರಿ(ಶೇಠ), ಸುರೇಶಕುಮಾರ ಹಜೇರಿ, ರಮೇಶ ಗೌಡಗೇರಿ, ಪ್ರಹ್ಲಾದ್ ಹಜೇರಿ, ಸಂತೋಷ ಹಜೇರಿ(ಭವಾನಿ),ಭವನಸಿಂಗ್ ಹಜೇರಿ, ಸಂಜೀವಕುಮಾರ ಹಜೇರಿ, ಕೆಸರಸಿಂಗ್ ಹಜೇರಿ, ದಿಲೀಪಸಿಂಗ್ ಹಜೇರಿ, ಪ್ರದೀಪ ವಿಜಾಪುರ, ವಿಠಲಸಿಂಗ್ ಹಜೇರಿ, ಅರುಣ ದಡೇದ, ಸುನಿಲ್ ಬಿಜಾಪುರ, ಶಿವಾ ಗೌಡಗೇ-ರಿ,ನಿಖಿಲ್ ಮೂಲಿಮನಿ, ವಿಶ್ವ ನಾಯಕ, ಗಂಗಾರಾಮ ಬಿಜಾಪುರ, ರಾಘು ಮೂಲಿಮನಿ, ರಾಘು ಕೋಟಿಮನಿ, ಬಬ್ಲು ಬಿಜಾಪುರ ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಎಲೆಕ್ಟ್ರೋಪ್ಲೇಟರ್

ಎಲೆಕ್ಟ್ರೋಪ್ಲೇಟರ್ (Electroplater) ಟ್ರೇಡ್‌ನ ಎರಡು ವರ್ಷಗಳ ತರಬೇತಿ ಅವಧಿಯಲ್ಲಿ, ಅಭ್ಯರ್ಥಿಗೆ ಉದ್ಯೋಗದ ಪಾತ್ರಕ್ಕೆ ಸಂಬಂಧಿಸಿದ ವೃತ್ತಿಪರ ಕೌಶಲ್ಯ (Professional Skill), ವೃತ್ತಿಪರ ಜ್ಞಾನ (Professional Knowledge) ಹಾಗೂ ಉದ್ಯೋಗಾರ್ಹತಾ ಕೌಶಲ್ಯಗಳು (Employability Skills) ಕುರಿತು ಸಮಗ್ರ ತರಬೇತಿ ನೀಡಲಾಗುತ್ತದೆ.

ಇದರ ಜೊತೆಗೆ, ಅಭ್ಯರ್ಥಿಯ ಆತ್ಮವಿಶ್ವಾಸ, ಕಾರ್ಯನೈಪುಣ್ಯ ಮತ್ತು ಸಮಸ್ಯೆ ಪರಿಹಾರ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುವ ಉದ್ದೇಶದಿಂದ ಯೋಜನಾ ಕಾರ್ಯಗಳು (Project Work) ಹಾಗೂ ಪಠ್ಯೇತರ ಚಟುವಟಿಕೆಗಳು (Extra-Curricular Activities) ಕೈಗೊಳ್ಳುವಂತೆ ಪ್ರೋತ್ಸಾಹಿಸಲಾಗುತ್ತದೆ. ವಿದ್ಯಾರ್ಹತೆ 10 ನೇ ತರಗತಿ ಉತ್ತೀರ್ಣ

ವೃತ್ತಿಪರ ಕೌಶಲ್ಯ ವಿಷಯದ ಅಡಿಯಲ್ಲಿ ಒಳಗೊಂಡಿರುವ ಪ್ರಮುಖ ಅಂಶಗಳು ಕೆಳಗಿನಂತಿವೆ:

ಎಲೆಕ್ಟ್ರೋಪ್ಲೇಟಿಂಗ್‌ನ ಮೂಲಭೂತ ತತ್ವಗಳು ಮತ್ತು

ವಿಧಾನಗಳು ಲೋಹಗಳ ಮೇಲ್ಮೈ ಸಿದ್ಧತೆ ಮತ್ತು

ಸ್ವಚ್ಛಗೊಳಿಸುವಿಕೆ ವಿವಿಧ ಲೋಹಗಳ ಮೇಲೆ ಲೇಪನ

(Plating) ತಂತ್ರಗಳು ರಾಸಾಯನಿಕ ದ್ರಾವಣಗಳ ತಯಾರಿ

ಮತ್ತು ಬಳಕೆ ಪ್ಲೇಟಿಂಗ್ ಉಪಕರಣಗಳು ಹಾಗೂ ಯಂತ್ರಗಳ

ನಿರ್ವಹಣೆ ಗುಣಮಟ್ಟ ಪರಿಶೀಲನೆ ಮತ್ತು ದೋಷ ಪತ್ತೆ

ಸುರಕ್ಷತಾ ಕ್ರಮಗಳು ಮತ್ತು ಕೈಗಾರಿಕಾ ನಿಯಮಗಳು

ತ್ಯಾಜ್ಯ ನಿರ್ವಹಣೆ ಮತ್ತು ಪರಿಸರ ಸಂರಕ್ಷಣೆ

ಈ ತರಬೇತಿ ಮೂಲಕ ಅಭ್ಯರ್ಥಿಗಳು ಎಲೆಕ್ಟ್ರೋಪ್ಲೇಟಿಂಗ್ ಕ್ಷೇತ್ರದಲ್ಲಿ ತಾಂತ್ರಿಕ ಜ್ಞಾನ ಪಡೆದು ಕೈಗಾರಿಕೆಗಳಲ್ಲಿ ಉದ್ಯೋಗ ಪಡೆಯಲು ಸಿದ್ಧರಾಗುತ್ತಾರೆ.

## ಪ್ರತಿಯೊಬ್ಬ ನಾಗರಿಕನ ಮತವು ಕೇವಲ ಹಕ್ಕು ಮಾತ್ರವಲ್ಲ, ದೇಶದ ಭವಿಷ್ಯ ನಿರ್ಧರಿಸುವ ಶಕ್ತಿ ಜಿ ಕುಮಾರ್ ನಾಯಕ

❑ ನೈಜ್ಯ ದೆಸೆ ನ್ಯೂಸ್

ರಾಯಚೂರು: ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ರಾಯಚೂರು?ಯಾದಗಿರಿ ವತಿಯಿಂದ ಹಮ್ಮಿಕೊಂಡಿದ್ದ "ಕಾಂಗ್ರೆಸ್ ನಡೆ, ಮತ ರಕ್ಷಣೆ ಕಡೆ" ಕಾರ್ಯಕ್ರಮವು ಉತ್ಸಾಹಭರಿತವಾಗಿ ನಡೆಯಿತು. ಕಾರ್ಯಕ್ರಮವನ್ನು ಜಿ ಕುಮಾರ್ ನಾಯಕ. ಉದ್ಘಾಟಿಸಿ ಮಾತನಾಡಿ, ಪ್ರಜಾಪ್ರಭುತ್ವದ ಅಸ್ತಿತ್ವವೇ ಮತದಾನದ ಹಕ್ಕಿನ ಮೇಲೆ ನಿಂತಿದೆ ಎಂದು ಹೇಳಿದರು.

ಪ್ರತಿಯೊಬ್ಬ ನಾಗರಿಕನ ಮತವು ಕೇವಲ ಹಕ್ಕು ಮಾತ್ರವಲ್ಲ, ದೇಶದ ಭವಿಷ್ಯ ನಿರ್ಧರಿಸುವ ಶಕ್ತಿಯಾಗಿದೆ. ಮತದಾನದ ಹಕ್ಕನ್ನು ದುರ್ಬಲಗೊಳಿಸುವ ಯಾವುದೇ ಪ್ರಯತ್ನಗಳನ್ನು ಜನರು ಎಚ್ಚರಿಕೆಯಿಂದ ಎದುರಿಸಬೇಕು. ಮತದಾರರ ಪಟ್ಟಿಯಲ್ಲಿ ಹೆಸರು ಕೈಬಿಡುವುದು, ಮತದಾನದ ಪ್ರಕ್ರಿಯೆಯಲ್ಲಿ ಗೊಂದಲ ಸೃಷ್ಟಿಸುವುದು ಅಥ-'ವಾ ಜನರ ಧ್ವನಿಯನ್ನು ಕುಂಠಿತಗೊಳಿಸುವ ಯಾವುದೇ ಕ್ರಮಗಳು ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುತ್ತವೆ ಎಂದು ಅವರು ಹೇಳಿದರು.

ಸಂವಿಧಾನವು ಪ್ರತಿಯೊಬ್ಬರಿಗೂ



ಸಮಾನ ಹಕ್ಕುಗಳನ್ನು ನೀಡಿದ್ದು, ಆ ಹಕ್ಕುಗಳನ್ನು ಕಾಪಾಡುವ ಹೊಣೆಗಾರಿಕೆ ನಮ್ಮೆಲ್ಲರ ಮೇಲಿದೆ. ಕಾಂಗ್ರೆಸ್ ಪಕ್ಷವು ಸದಾ ಜನಸಾಮಾನ್ಯರ ಪರವಾಗಿ ನಿಂತು ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಅಭಿವೃದ್ಧಿಗಾಗಿ ಹೋರಾಟ ನಡೆಸುತ್ತಿದೆ. ಬಡವರು, ರೈತರು, ಕಾರ್ಮಿಕರು, ಮಹಿಳೆಯರು ಮತ್ತು ಯುವಜನರ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವ ದಿಕ್ಕಿನಲ್ಲಿ ಪಕ್ಷ ನಿರಂತರವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದರು.

ಯುವಜನತೆ ರಾಜಕೀಯ ಹಾಗೂ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು. ಮಹಿಳೆಯರು ನಾಯಕತ್ವದ ಜವಾಬ್ದಾರಿಗಳನ್ನು ಸ್ವೀಕರಿಸಿ ಸಮಾಜ ಪರಿವರ್ತನೆಯಲ್ಲಿ ಪ್ರಮುಖ ಪಾತ್ರ ವಹಿಸಬೇಕು. ಪಕ್ಷದ ಸಂಘಟನೆ ಗ್ರಾಮಮಟ್ಟದಿಂದ ಬಲವಾಗಬೇಕು; ಆಗ ಮಾತ್ರ ಜನರ ಆಶಯಗಳಿಗೆ ತಕ್ಕ ರಾಜಕೀಯ ಬದಲಾವಣೆ ಸಾಧ್ಯವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಬಸವರಾಜ ಪಾಟೀಲ್ ಇಟಗಿ , 



ಯಾದಗಿರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಬಸರೆಡ್ಡಿ ಅನಾಪುರ, ಕಾರ್ಯಾಧ್ಯಕ್ಷರಾದ ಎ ವಸಂತ್ ಕುಮಾರ್ , ಶಾಸಕರಾದ ಬಸನಗೌಡ ದದ್ದಲ್ ಸೇರಿದಂತೆ ಎರಡೂ ಜಿಲ್ಲೆಯ ಬ್ಲಾಕ್ ಅಧ್ಯಕ್ಷರು, ಮಹಿಳಾ ಕಾಂಗ್ರೆಸ್ ಘಟಕದವರು, ಯುವ ಕಾಂಗ್ರೆಸ್ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

ಸಭೆಯಲ್ಲಿ ಮತದಾರರ ಜಾಗೃತಿ ಅಭಿಯಾನ, ಪಕ್ಷ ಸಂಘಟನೆ ಬಲವರ್ಧನೆ ಮತ್ತು ಮುಂದಿನ ದಿನಗಳಲ್ಲಿ ಕೈಗೊಳ್ಳಬೇಕಾದ ಜನಪರ ಹೋರಾಟಗಳ ಕುರಿತು ಚರ್ಚೆ ನಡೆಯಿತು. ಕಾರ್ಯಕರ್ತರು ಪಕ್ಷದ ಸಂದೇಶವನ್ನು ಮನೆಮನೆಗೂ ತಲುಪಿಸಿ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಉಳಿಸುವ ಸಂಕಲ್ಪ ವ್ಯಕ್ತಪಡಿಸಿದರು.

## ಅಧಿಕ ಮಾಸದ ಪುಣ್ಯಕಾಲದಲ್ಲಿ ಕಾಳಿಕಾದೇವಿ ಸನ್ನಿಧಿಯಲ್ಲಿ ದೇವಿಪುರಾಣ ಪಾರಾಯಣ, ಕುಂಕುಮಾರ್ಚನೆ.

❑ ನೈಜ್ಯ ದೆಸೆ ನ್ಯೂಸ್

**ಅಧಿಕ ಮಾಸದ ಅಂಗವಾಗಿ ಬಳಗಾನೂರು ಪಟ್ಟಣದ ಶ್ರೀ ಕಾಳಿಕಾದೇವಿ ದೇವಸ್ಥಾನದಲ್ಲಿ ಶುಕ್ರವಾರ ಬೆಳಿಗ್ಗೆ ದೇವಿಪುರಾಣ ಪಾರಾಯಣ, ಉಡಿ ತುಂಬುವ ಹಾಗೂ ಕುಂಕುಮಾರ್ಚನೆ ಕಾರ್ಯಕ್ರಮಗಳು ಭಕ್ತಿಭಾವದಿಂದ ಜರುಗಿದವು.**

ಪುರಾಣ ಪ್ರವಚನಕಾರರಾದ ಡಾಕ್ಟರ್,ಶರಭಯ್ಯ ಸ್ವಾಮಿ ಗಣಾಚಾರಿ ಅವರು ಒಂದೇ ದಿನದಲ್ಲಿ ಹದಿನೆಂಟು ಅಧ್ಯಾಯಗಳನ್ನು ಒಳಗೊಂಡ ಶ್ರೀದೇವಿ ಪುರಾಣವನ್ನು ಪಾರಾಯಣ ಮಾಡುವ ಮೂಲಕ ಭಕ್ತರನ್ನು ಆಧ್ಯಾತ್ಮಿಕ ಲೋಕಕ್ಕೆ ಕರೆದೊಯ್ದರು. ತಬಲಾ ವಾದಕರಾದ ಬಸವರಾಜ ಸಾಲವಾಡಗಿ ಹಾಗೂ



ಗವಾಯಿಗಳಾದ ಶಿವಪುತ್ರಪ್ಪ ಮೋಟಗಿ ಅವರು ಸಂಗೀತ ಸಹಕಾರ ನೀಡಿದರೆ, ಶರಭಯ್ಯ ಶಾಸ್ತ್ರಿಗಳು ಪುರಾಣ ಪಾರಾಯಣ ಮಾಡಿದರು. ಶುಕ್ರವಾರ ಬೆಳಗಿನ ಬ್ರಾಹ್ಮೀ ಮುಹೂರ್ತದಲ್ಲಿ ಶ್ರೀ ಕಾಳಿಕಾದೇವಿಗೆ ಪಂಚಾಮೃತ ಅಭಿಷೇಕ, ವಿಶೇಷ ಅಲಂಕಾರ ಹಾಗೂ ಪೂಜೆ ನೆರವೇರಿಸಲಾಯಿತು. ಬಳಿಕ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಾಗೂ ದೇವಿಗೆ ಕುಂಕುಮಾರ್ಚನೆ ನಡೆಯಿತು.

ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕ ಪ್ರಭಣ್ಣ,ಸಮಿತಿಯ ಪದಾಧಿಕಾರಿಗಳು, ಸದಸ್ಯರು, ಪಟ್ಟಣದ ವಿಶ್ವಕರ್ಮ ಸಮಾಜದ ಹಿರಿಯರು, ಯುವಕರು ಹಾಗೂ ಸುಮಂಗಲೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ದೇವಿಪುರಾಣ ಶ್ರವಣ ಮಾಡಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ವರದಿ: ಸುರೇಶ ಬಳಗಾನೂರು

## ಕೊಲ್ಲೂರು ಮೂಕಾಂಬಿಕೆ ದರ್ಶನ ಪಡೆದು, ಬೆಳ್ಳಿ ಖಡ್ಗ ಅರ್ಪಿಸಿದ ತಮಿಳುನಾಡು ಸಿಎಂ ವಿಜಯ್

❑ ನೈಜ್ಯ ದೆಸೆ ನ್ಯೂಸ್

**ಉಡುಪಿ: ತಮಿಳುನಾಡು ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರು ಶುಕ್ರವಾರ ಉಡುಪಿ ಜಿಲ್ಲೆಯ ಪ್ರಸಿದ್ಧ ಮೂಕಾಂಬಿಕೆ ದೇವಿ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ ಪೂಜೆ ಸಲ್ಲಿಸಿದರು. ಇಂದು ಮಧ್ಯಾಹ್ನ ವಿಶೇಷ ವಿಮಾನದ ಮೂಲಕ ದೆಹಲಿಯಿಂದ ಮಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ ವಿಜಯ್ ಅವರು, ಅಲ್ಲಿಂದ ಕಾರಿನಲ್ಲಿ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿ ನೀಡಿದರು.**



ತಮಿಳುನಾಡು ಸಿಎಂ ವಿಜಯ್ ಅವರಿಗೆ ದೇವಸ್ಥಾನದ ಆಡಳಿತ ಮಂಡಳಿಯ ಸದಸ್ಯರು, ಹೂಗುಚ್ಛ ನೀಡಿ ಸ್ವಾಗತ ಕೋರಿದರು. ಬಳಿಕ ಮಂತ್ರಘೋಷದೊಂದಿಗೆ ಕ್ಷೇತ್ರದೊಳಗೆ ಅರ್ಚಕ ವೃಂದ ಬರಮಾಡಿಕೊಂಡಿತು. ವಿಜಯ್ ಅವರು ಸಹ ದೇವಸ್ಥಾನದ ಸಂಪ್ರದಾಯದಂತೆ ಶರ್ಟ್ ಬಿಚ್ಚಿ, ಶಲ್ಯ ಧರಿಸಿ ದೇವಸ್ಥಾನ ಪ್ರವೇಶಿಸುವ ಮೂಲಕ ಶಿಷ್ಟಾಚಾರ ಪಾಲನೆ ಮಾಡಿದರು. ಪ್ರಧಾನ ಅರ್ಚಕ ರಾಮಚಂದ್ರ ಅಡಿಗ ಅವರ ನೇತೃತ್ವದಲ್ಲಿ ಸಂಕಲ್ಪ ಪೂಜೆ ನೆರವೇರಿಸಲಾಯಿತು. ಸಿಎಂ ವಿಜಯ್ ಸಂಕಲ್ಪ ಪೂಜೆ ಮಾಡಿದರು. ಶಕ್ತಿ ದೇವಿಗೆ 1 ಕೆಜಿ 600 ಗ್ರಾಮದ ಬೆಳ್ಳಿ ಖಡ್ಗ, ರೇಷ್ಮೆ ಸೀರೆ, ಫಲ–ತಾಂಬೂಲ ಅರ್ಪಿಸಿ ವಿಜಯ್ ಪ್ರಾರ್ಥನೆ ಸಲ್ಲಿಸಿದರು. ಸಂಕಲ್ಪ ಪೂಜೆ ಬಳಿಕ ದೀಪಾರಾಧನೆ ಮಾಡಲಾಯಿತು. ಈ ವೇಳೆ ಸಿಎಂಗೆ ಅರ್ಚಕರು ರಕ್ಷಾ ದಾರ ಕಟ್ಟಿದರು. ಪೂಜೆ ಬಳಿಕ ವಿಜಯ್ ದೇವಸ್ಥಾನದಿಂದ ಹೊರಟರು.

## ವೈದ್ಯಕೀಯ ಕೋರ್ಸ್ ಶುಲ್ಕ ಏರಿಸದಿರಲು ನಿರ್ಧಾರ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ರಾಜ್ಯದ ಸರ್ಕಾರಿ ಹಾಗೂ ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕವನ್ನು ಏರಿಕೆ ಮಾಡದಿರುವ ತೀರ್ಮಾನವನ್ನು ರಾಜ್ಯ ಸರ್ಕಾರ ಕೈಗೊಂಡಿದೆ.**

ವೈದ್ಯಕೀಯ ಮತ್ತು ದಂತ ವೈದ್ಯಕೀಯ ಶಿಕ್ಷಣಶುಲ್ಕವನ್ನು ಏರಿಕೆ ಮಾಡಬೇಕು ಎಂಬ ಬೇಡಿಕೆಯನ್ನು ಖಾಸಗಿ ವೈದ್ಯಕೀಯ ಕಾಲೇಜುಗಳು ಇಟ್ಟಿದ್ದವಾದರೂ ಅದನ್ನು ತಳ್ಳಿ ಹಾಕಿರುವ ರಾಜ್ಯ ಸರ್ಕಾರ, ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕ ಏರಿಕೆ



ಮಾಡದಿರುವ ತೀರ್ಮಾನ ಕೈಗೊಂಡಿದ್ದು, ಕಳೆದ ವರ್ಷ ಶುಲ್ಕವೆ ಈ ವರ್ಷವೂ ಇರಲಿದೆ. ನೈದ್ಯಕೀಯ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ನೇತೃತ್ವದಲ್ಲಿ ವಿಧಾನಸೌಧದಲ್ಲಿಂದು ನಡೆದ ಉನ್ನತ ಮಟ್ಟದ ಸಭೆಯಲ್ಲಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕ ಏರಿಕೆ ಮಾಡದಿರುವ ನಿರ್ಧಾರವನ್ನು ಕೈಗೊಳ್ಳಲಾಗಿದೆ.

ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ, ಮರು ಪರೀಕ್ಷೆ ಇವುಗಳಿಂದ ವಿದ್ಯಾರ್ಥಿಗಳು ಮತ್ತು ಪೋಷಕರು ಬಸವಳಿದಿದ್ದು, ಒಂದು ರೀತಿ ಆಘಾತದ ಸ್ಥಿತಿಯಲ್ಲಿದ್ದಾರೆ. ಹೀಗಿರುವಾಗ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕವನ್ನು ಏರಿಸುವುದು ಸಮಂಜಸವಲ್ಲ ಎಂಬ ತೀರ್ಮಾನಕ್ಕೆ ವೈದ್ಯಕೀಯ ಶಿಕ್ಷಣ ಸಚಿವರು ಬಂದಿದ್ದು, ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸ್‌ಗಳ ಶುಲ್ಕವನ್ನು ಏರಿಕೆ ಮಾಡದಿರುವುದನ್ನು ಈ ಸಭೆಯಲ್ಲಿ ಕೈಗೊಳ್ಳಲಾಗಿದೆ.

ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ನಡೆದ ಇಂದಿನ ಸಭೆಯಲ್ಲಿ ರಾಜ್ಯಸಭಾ ಸದಸ್ಯ ರಾಧಾಕೃಷ್ಣ, ಎಂ.ಎಸ್. ರಾಮಯ್ಯ ವೈದ್ಯಕೀಯ ಕಾಲೇಜಿನ ಮುಖ್ಯ ಕಾರ್ಯದರ್ಶಿ ಎಂ.ಆರ್.ಜಯರಾಂ, ವೈದ್ಯಕೀಯ ಶಿಕ್ಷಣ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಮೊಹಮದ್ ಮೊಹಿಸಿನ್ ಸೇರಿದಂತೆ ಖಾಸಗಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳ ಸಂಘದ ಪದಾಧಿಕಾರಿಗಳು, ಕಾಮೆಡ್–ಕೆ ಪದಾಧಿಕಾರಿಗಳು ಪಾಲ್ಗೊಂಡಿದ್ದರು

## ರಾಷ್ಟ್ರಪತಿ, ಉಪ ರಾಷ್ಟ್ರಪತಿಯವರನ್ನು ಭೇಟಿ ಮಾಡಿದ ಸಿಎಂ ಡಿಕೆಶಿ

❑ ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಮುಖ್ಯಮಂತ್ರಿ ಡಿ. ಕೆ.ಶಿವಕುಮಾರ್ ದೆಹಲಿಯಲ್ಲಿಂದು ರಾಷ್ಟ್ರಪತಿ ಹಾಗೂ ಉಪ ರಾಷ್ಟ್ರಪತಿಯವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದ್ದಾರೆ. ಬೆಳಗ್ಗೆ ರಾಷ್ಟ್ರಪತಿ ಭವನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಡಿ.ಕೆ.ಶಿವ ಕುಮಾರ್ ಭೇಟಿ ಮಾಡಿದ್ದರು.**

ನಂತರ ಉಪ ರಾಷ್ಟ್ರಪತಿ



ಸಿ.ಪಿ.ರಾಧಾಕೃಷ್ಣಾ ಅವರನ್ನು ಭೇಟಿ ಮಾಡಿದ್ದಾರೆ.ಕಳೆದ ಮೂರು ದಿನಗಳಿಂದಲೂ ದೆಹಲಿಯಲ್ಲೇ ಇರುವ ಮುಖ್ಯಮಂತ್ರಿಯವರು, ನಿನ್ನೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿದ್ದರು. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿ ಮಾಡಿದ್ದರು. ಅದಕ್ಕೂ ಮುನ್ನ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ, ಲೋಕ ಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಸಂಸದೆ ಪ್ರಿಯಾಂಕ ಗಾಂಧಿಯವರನ್ನು ಭೇಟಿ ಮಾಡಿದ್ದರು.

ದೆಹಲಿಯಲ್ಲಿ ಅಖಿಲ ಭಾರತ ಕಾಂಗ್ರೆಸ್‌ನ ಯುವ ಮಹಿಳಾ ಹಾಗೂ ವಿದ್ಯಾರ್ಥಿ ಘಟಕಗಳಿಗೆ ಭೇಟಿ ನೀಡಿ, ಡಿ.ಕೆ.ಶಿವಕುಮಾರ್ ಚರ್ಚೆ ನಡೆಸಿದರು. ದೆಹಲಿಯಲ್ಲಿ ಪ್ರಮುಖ ನಾಯಕರು ಹಾಗೂ ಕೇಂದ್ರ ಸಚಿವರ ಜೊತೆ ಸಭೆಗಳ ಮೂಲಕ ಡಿ.ಕೆ.ಶಿವಕುಮಾರ್ ರಾಜ್ಯದ ಅಭಿವೃದ್ಧಿಗೆ ಭದ್ರ ಬುನಾದಿಯ ಸಿದ್ಧತೆಯಲ್ಲಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## "ಬಸವತತ್ವದ ಮಾರ್ಗದರ್ಶನ ಮಾಡಿಸಿದ ಚುಕ್ಕಿ ಪ್ರತಿಷ್ಠಾನ"

❑ ನೈಜ್ಯ ದೆಸೆ ನ್ಯೂಸ್

**ಸಿರಿವಾರ: ಬಸವಾದಿ ಶರಣರು ನೀಡಿದ ತತ್ವಾದರ್ಶಗಳು ನಮ್ಮ ಬಾಳು ಬೆಳಗುತ್ತವೆ. ಈ ಮೂಲಕ ಬಸವಾದಿ ಶರಣರ ತತ್ವಗಳು ಇಂದಿನ ಜನರಿಗೆ ಅವಶ್ಯಕವಾಗಿವೆ ಎಂದು ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್.ಬೋಸುರಾಜ್ ತಿಳಿಸಿದರು.**

ಅವರು ಗುರುವಾರ ಸ್ಥಳೀಯ ಚುಕ್ಕಿ ಪ್ರತಿಷ್ಠಾನದ ವತಿಯಿಂದ ಕಳೆದ 50 ವರ್ಷಗಳಿಂದ ಸತತವಾಗಿ ನಡೆಸಿಕೊಂಡು ಬಂದಿರುವ ಬಸವತತ್ವ ಚಿಂತನ ಗೋಷ್ಠಿ, ಸಂಗೀತ, ಕೃತಿಗಳಿಗೆ ಪ್ರಶಸ್ತಿ ಪುರಸ್ಕಾರ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳ ಅಂಗವಾಗಿ ಗುರುವಾರ ನಡೆದ ವಿಶೇಷ "ಸುವರ್ಣ ಸಂಭ್ರಮ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬೆಳಿಗ್ಗೆಯಿಂದ ವಿವಿಧ ಧಾರ್ಮಿಕ ವಿಧಿವಿಧಾನ, ಶ್ರೀ ಬಸವಾದಿ ಶರಣರ ಪೂಜೆಯೊಂದಿಗೆ ಕಾರ್ಯಕ್ರಮಗಳು ನಡೆದವು. ಈಶ್ವರ ದೇವಸ್ಥಾನದಿಂದ



ಚುಕ್ಕಿ ರುದ್ರಮ್ಮ ಉಮಾಪತೆಪ್ಪ ಮಂಟಪದ ತನಕ ದಾವಣಗೆರೆ ಬಸವ ಕಲಾ ಬಳಗ ತಂಡದ ವಚನ ಭಜನೆಯೊಂದಿಗೆ ಸಾಂಸ್ಕೃತಿಕ ನಾಯಕ ವಿಶ್ವ ಗುರು ಬಸವಣ್ಣನ ಭಾವಚಿತ್ರ ಮೆರವಣಿಗೆ ನಡೆಯಿತು.

ನಂತರ ಚುಕ್ಕಿ ರುದ್ರಮ್ಮ ಉಮಾಪತಪ್ಪ ಕಲ್ಯಾಣ ಮಂಟಪದಲ್ಲಿ ಷಟಸ್ಥಲ ಧ್ವಜಾರೋಹಣ ನೆರವೇರಿಸಲಾಯಿತು. ಶರಣಪ್ಪ ಗೋನಾಳ ರಾಯಚೂರು ತಂಡದಿಂದ ವಚನ ಗಾಯನ ಕಾರ್ಯಕ್ರಮ ಯಶಸ್ವಿಯಾಗಿ ಮೂಡಿಬಂದಿತು. 'ಬಸವತತ್ವ ಚಿಂತನ ಗೋಷ್ಠಿ'ಯಲ್ಲಿ 'ವಿಷಪೂರಿತ ಸನ್ನಿವೇಶದಲ್ಲಿ ಬಸವತತ್ವದ ಅವಶ್ಯಕತೆ ಮಠಾಧೀಶರು, ಪ್ರಚಾರಕರು, ಬಸವತತ್ವ ಮುಟ್ಟಿಸುವಲ್ಲಿ ಸಫಲಾರಾಗಿದ್ದಾರೆಯೇ? ವಿಫಲರಾಗಿದ್ದಾರೆಯೇ? ಮುಂದಿನ ನಡೆ ಏನು? ಎಂಬ ಕುರಿತು ಸಂವಾದಗೋಷ್ಠಿ ನಡೆಯಿತು.

ಶ್ರೀ ಜಗದ್ಗುರು ತೋಂಟದ ಸಿದ್ಧಲಿಂಗೇಶ್ವರ ಅನುಭವ ಮಂಟಪ ಆಳಂದದ ಪೂಜ್ಯಶ್ರೀ ವಿಶ್ವನಾಥ ಕೋರಣೇಶ್ವರ ಸ್ವಾಮಿಗಳು ಅಧ್ಯಕ್ಷತೆ ವಹಿಸಿ ಮಾತನಾಡಿದರು. ದಾವಣಗೆರೆ ಬಸವ ಕಲಾ ಬಳಗ ತಂಡದಿಂದ ವಚನ ಭಜನೆಗಳು, ರಾಯಚೂರು ಮತ್ತು ಮಾನ್ವಿ ಬಸವಕೇಂದ್ರ ಮಹಿಳಾ ತಂಡದಿಂದ ವಚನಗಳು ಹಾಗೂ ನೀರಮಾನ್ವಿ ಬಸವ ಸೈನ್ಯ ಮಕ್ಕಳಿಂದ ಆಕರ್ಷಕ ವಚನ ನೃತ್ಯ ಕಾರ್ಯಕ್ರಮಗಳು ಜರುಗುವ ಮೂಲಕ ಸುವರ್ಣ ಸಂಭ್ರಮಕ್ಕೆ ಕಳೆ ತಂದವು.

ಸೂಗಪ್ಪ ಸಾಹುಕಾರ ಚುಕ್ಕಿ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಶ್ವಾರಾಧ್ಯ ಸತ್ಯಂಪೇಟೆ ನಿರ್ವಹಿಸಿದರು. ಮಾನ್ವಿ ಶಾಸಕ ಜಿ. ಹಂಪಯ್ಯನಾಯಕ, ಜಾಗತಿಕ ಮಹಾಸಭಾ ಬೀದರ್ ಜಿಲ್ಲಾ ಅಧ್ಯಕ್ಷರಾದ ಬಸವರಾಜ ಧನ್ನೂರು ಬೀದರ್, ಶರಣ ಚಿಂತಕ ಡಾ. ಜೆ.ಎಸ್. ಪಾಟೀಲ್, ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಸಿರವಾರದ ಸಂಚಾಲಕಿ ಜ್ಯೋತಿ ಅಕ್ಕನವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ರಾಯಚೂರು ಬಸವಕೇಂದ್ರದ ಅಧ್ಯಕ್ಷ ರಾಚನಗೌಡ ಕೊಳ್ಳೂರು, ಶರಣಭೂಪಾಲ ನಾಡಗೌಡ, ನೀಲಾಂಬಿಕಾ ಯೋಗಾಶ್ರಮ ಜಾಗೀರಜಾಡಲದಿನ್ನಿಯ ವೀರಭದ್ರಯ್ಯಸ್ವಾಮಿ, ರಾಯಚೂರು ಜಿಲ್ಲಾ ಜಾ.ಲಿಂ.ಮಾ.ಅಧ್ಯಕ್ಷ ಪಿ.ರುದ್ರಪ್ಪ, ಕಸಪ ಮಾಜಿ ಅಧ್ಯಕ್ಷರಾದ ಮಹಾಂತೇಶ ಮಸ್ಕಿ, ಜಿಕಸಾಪ ಅಧ್ಯಕ್ಷ ರಂಗಣ್ಣ ಪಾಟೀಲ್ ಅಳ್ಳುಂಡಿ, ಪ ಪಂ ಅಧ್ಯಕ್ಷ ಹಾಜಿ ಚೌಧ್ರಿ, ಬಸವಕೇಂದ್ರದ ಕಾರ್ಯದರ್ಶಿ ಚನ್ನಬಸಣ್ಣ ಮಹಾಜನ ಶೆಟ್ಟಿ ಸೇರಿದಂತೆ ಸಾವಿರಾರು ಸಾರ್ವಜನಿಕರು, ಶರಣ ಚಿಂತಕರು, ಮಹಿಳೆಯರು, ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101